# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ –255 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ:03–05–2025 ಶನಿವಾರ | ಪುಟ: 4 | ಬೆಲೆ : ರೂ.2–00

Volume - 02 Issue - 255 | RNI No: KARKAN/2023/88462 | KA/SK/CTA-874/2024-2026 | Chitradurga | Date: 03-05-2025 Saturday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಜಗದ್ಗುರು ಶಂಕರಚಾರ್ಯರ ಸಾಧನೆ ಮತ್ತು ವಿಚಾರಧಾರೆ ಇಂದಿಗೂ ಜೀವಂತ: ಶಾಸಕ 2

ಬಾಸುಮತಿ ಭತ್ತಬೆಳೆದ ರೈತ ಲಕ್ಷ್ಮಣ; ಹೆಚ್ಚು ಲಾಭದ ನಿರೀಕ್ಷೆಯಲ್ಲಿ ರೈತ 3

ಜಿಎನ್‌ಕೋಟೆ ಬಳಿ ಕೋಳಿ ಫಾರಂಗೆ 40 ಎಕರೆ ಭೂಮಿ: ಪ್ರತಿಭಟನೆ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಚಿತ್ರದುರ್ಗ ಆಕಾಶವಾಣಿ ಕೇಂದ್ರಕ್ಕೆ 34ರ ಹರೆಯ

» ಚಿತ್ರದುರ್ಗ

1991 ಮೇ 3 ರಂದು ಆರಂಭವಾದ ಚಿತ್ರದುರ್ಗ ಆಕಾಶವಾಣಿ ಕೇಂದ್ರ ಶನಿವಾರ 34 ವರ್ಷ ಪೂರೈಸಿ 35ನೇ ವರ್ಷಕ್ಕೆ ಪಾದಾರ್ಪಣೆ ಮಾಡುತ್ತಿದೆ. ಈ ಹಿನ್ನಲೆಯಲ್ಲಿ ಕೆಳಗೋಟೆಯ ಆಕಾಶವಾಣಿ ಕೇಂದ್ರಕ್ಕೆ ಶನಿವಾರ ಯೋಜನಾ ಮತ್ತು ಸಾಂಖ್ಯಿಕ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್, ಲೋಕಸಭಾ ಸದಸ್ಯ ಗೋವಿಂದ ಎಮ್. ಕಾರಜೋಳ ಭೇಟಿ ನೀಡಿ ಶುಭ ಹಾರೈಸಲಿದ್ದಾರೆ.ಸರ್ವೇ ಜನಃ ಸುಖಿನೋ ಭವಂತು, ಎಂಬ ಧ್ಯೇಯ ಮಂತ್ರದೊಂದಿಗೆ ಕಾರ್ಯನಿರ್ವಹಿಸುತ್ತಿರುವ ಚಿತ್ರದುರ್ಗ ಆಕಾಶವಾಣಿ ಕೇಂದ್ರ ತನ್ನದೇ ಆದ ಅಪಾರ ಶೋತ್ರ ಬಳಗ ಹೊಂದಿದೆ. 34 ವರ್ಷದಿಂದ ಮಾಹಿತಿ, ಶಿಕ್ಷಣ, ಮನರಂಜನೆಯ ಪ್ರಸಾರ ಕಾರ್ಯವನ್ನು ನಿರಂತರವಾಗಿ ಮಾಡುತ್ತಾ ಬಂದಿದೆ. ಸದ್ಯ ನೆಟ್‌ವರ್ಕ್ ಲೈವ್‌ಸ್ಟ್ರೀಮ್, ನ್ಯೂಸ್ ಆನ್ ಏರ್ ಆಪ್ ಹಾಗೂ ಡಿಟಿಹೆಚ್ ಸೇವೆಗಳ ಮೂಲಕ ವಿಶ್ವವ್ಯಾಪಿ ಜಾಲವನ್ನು ವಿಸ್ತರಿಸಿಕೊಂಡಿದೆ.ಶನಿವಾರ ಮುಂಜಾನೆ 8:30 ರಿಂದ ಸಂಜೆ 7:30 ವರೆಗೆ ಚಿತ್ರದುರ್ಗ ಆಕಾಶವಾಣಿ ವಿಶೇಷ ಕಾರ್ಯಕ್ರಮಗಳು ಬಿತ್ತರವಾಗಲಿವೆ. ಮುಂಜಾನೆ 8:30 ರಿಂದ 9 ಗಂಟೆಯವರೆಗೆ ಚಿತ್ರನಟಿ ಅದಿತಿ ಪ್ರಭುದೇವ ಅವರೊಂದಿಗೆ ನೇರ ಸಂದರ್ಶನ, 9 ರಿಂದ 10 ಗಂಟೆಯವರೆಗೆ ಕೇಳುಗರೊಂದಿಗೆ ನೇರ ಫೋನ್ ಇನ್ ಕಾರ್ಯಕ್ರಮ, 10 ರಿಂದ 11 ಗಂಟೆಯವರೆಗೆ ಸಾಧಕರ ಪರಿಚಯಾತ್ಮಕ ಸರಣಿ ಕಾರ್ಯಕ್ರಮದಲ್ಲಿ ಖ್ಯಾತ ಚಲನಚಿತ್ರ ನಿರ್ದೇಶಕ ಪುಟ್ಟಣ್ಣ ಕಣಗಲ್ ಅವರ ಶಿಷ್ಯ ಪಿ.ಹೆಚ್.ವಿಶ್ವನಾಥ್ ಭಾಗವಹಿಸುವರು. 11 ರಿಂದ 12 ಗಂಟೆಯ ವರೆಗೆ ಹೆಸರಾಂತ ಹಾಡುಗಾರ ತೋಟಪ್ಪ ಉತ್ತಂಗಿ ಅವರಿಂದ ಗಾನಸುಧೆ ಕಾರ್ಯಕ್ರಮ, ನಂತರ ಮಧ್ಯಾಹ್ನ 12 ರಿಂದ 1 ಗಂಟೆಯವರೆಗೆ ಆಕಾಶವಾಣಿ ಕೇಂದ್ರದಲ್ಲಿ ಕಾರ್ಯನಿರ್ವಹಿಸಿದ ಅಧಿಕಾರಿಗಳು ತಮ್ಮ ಸವಿ ನೆನಪು ಹಂಚಿಕೊಳ್ಳಲಿದ್ದಾರೆ. ಮಧ್ಯಾಹ್ನ 2:40 ರಿಂದ 3:40 ವರೆಗೆ ಕಾದಂಬರಿಕಾರ ಹಾಗೂ ಚಲಚಿತ್ರ ಸಾಹಿತಿ ಡಾ.ಬಿ.ಎಲ್. ವೇಣು ನೇರ ಮಾತು ಕತೆ ಕಾರ್ಯಕ್ರಮದಲ್ಲಿ ಭಾಗವಹಿಸುವರು. ಸಂಜೆ 5 ರಿಂದ 5:30 ವರೆಗೆ ಕವಿ ಹಾಗೂ ಸಾಹಿತಿಗಳ ಶುಭನುಡಿ ಕಾರ್ಯಕ್ರಮ ಪ್ರಸಾರವಾಗಲಿದೆ. ಸಂಜೆ 5:30 ಕ್ಕೆ ಚಿತ್ರದುರ್ಗ ಆಕಾಶವಾಣಿ ಕುರಿತು ಉದಯೋನ್ಮುಖ ಕವಿಗಳು ಬರೆದ ಕಾವ್ಯಗಳ ಪ್ರಸ್ತುತಿ ಪ್ರಸಾರವಾಗಲಿದೆ. ಸಂಜೆ 6:50ಕ್ಕೆ ಕೃಷಿ, ತೋಟಗಾರಿಕೆ, ಕೃಷಿ ವಿಜ್ಞಾನ ಕೇಂದ್ರದ ವಿಜ್ಞಾನಿಗಳ ಅಭಿಪ್ರಾಯಗಳನ್ನಾಧರಿಸಿದ ಕಾರ್ಯಕ್ರಮ ಹಾಗೂ ಸಂಜೆ 7:30ಕ್ಕೆ ರೈತ ಕೇಳುಗರ ಅಭಿಪ್ರಾಯ ಆಧರಿಸಿದ ಕಾರ್ಯಕ್ರಮ ಬಿತ್ತರವಾಗುವುದು. ಕೇಳುಗರು ಸದಾ ಕಾಲ ಚಿತ್ರದುರ್ಗ ಆಕಾಶವಾಣಿ ಕೇಂದ್ರಕ್ಕೆ ತಮ್ಮ ಪ್ರೋತ್ಸಾಹ ನೀಡುವಂತೆ ನಿಲಯದ ಕಾರ್ಯಕ್ರಮ ಮುಖ್ಯಸ್ಥ ಎಸ್.ಆರ್.ಭಟ್, ನಿಲಯದ ತಾಂತ್ರಿಕ ಮುಖ್ಯಸ್ಥ ಕೆ.ಕೆ. ಮಣಿ ಹಾಗೂ ಪ್ರಸಾರ ಕಾರ್ಯ ಮುಖ್ಯಸ್ಥ ಶಿವಪ್ರಕಾಶ ಡಿ.ಆರ್. ಕೋರಿದ್ದಾರೆ.

### ಮೇ.4 ರಂದು ನೀಟ್ ಪರೀಕ್ಷೆ : 3013 ವಿದ್ಯಾರ್ಥಿಗಳ ನೊಂದಣಿ

» ಚಿತ್ರದುರ್ಗ

ನ್ಯಾಷಿನಲ್ ಟೆಸ್ಟಿಂಗ್ ಏಜೆನ್ಸಿ ವತಿಯಿಂದ ಮೇ.4 ರಂದು ನೀಟ್ ಪರೀಕ್ಷೆ ನಡೆಯಲಿದೆ. ಚಿತ್ರದುರ್ಗ ಜಿಲ್ಲೆಯಲ್ಲಿ ಒಟ್ಟು 3013 ವಿದ್ಯಾರ್ಥಿಗಳು ನೊಂದಣಿ ಮಾಡಿಕೊಂಡಿದ್ದು, ಒಟ್ಟು 6 ಪರೀಕ್ಷಾ ಕೇಂದ್ರಗಳಲ್ಲಿ ಮೇ.4 ರಂದು ಮಧ್ಯಾಹ್ನ 2 ರಿಂದ ಸಂಜೆ 5 ಗಂಟೆವರೆಗೆ ನೀಟ್ ಪರೀಕ್ಷೆ ಜರುಗಲಿದೆ. ಚಿತ್ರದುರ್ಗ ನಗರದ ಸರ್ಕಾರಿ ಬಾಲಕರ ಹಾಗೂ ಬಾಲಕಿಯರ ಪದವಿ ಪೂರ್ವ ಕಾಲೇಜು, ಸರ್ಕಾರಿ ಕಲಾ ಹಾಗೂ ವಿಜ್ಞಾನ ಕಾಲೇಜು, ಚಳ್ಳಕೆರೆ ನಗರದ ಹೆಚ್.ಪಿ.ಪಿ.ಸಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಹಾಗೂ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಪರೀಕ್ಷಾ ಕೇಂದ್ರಗಳನ್ನು ಸ್ಥಾಪಿಸಲಾಗಿದೆ. ನೀಟ್ ಪರೀಕ್ಷೆ ಹಿನ್ನಲೆಯಲ್ಲಿ ಪರೀಕ್ಷಾ ಕೇಂದ್ರಗಳ ಪ್ರಾಂಶುಪಾಲರಿಗೆ ಸೂಕ್ತ ಮಾಹಿತಿ ನೀಡಲಾಗಿದೆ. ಪರೀಕ್ಷಾ ಕೇಂದ್ರಗಳ ಸುತ್ತ ಶುಚಿತ್ವ ಕಾರ್ಯ ಕೈಗೊಳ್ಳುವಂತೆ ಸಂಬಂಧಿಸಿದ ನಗರಸಭೆ ಆಯುಕ್ತರಿಗೆ ನಿರ್ದೇಶನ ನೀಡಲಾಗಿದೆ. ಪರೀಕ್ಷಾ ಅವಧಿಯಲ್ಲಿ ಕೇಂದ್ರಗಳಿಗೆ ವಿದ್ಯುತ್ ವ್ಯತ್ಯಯವಾಗದಂತೆ ಮುಂಜಾಗೃತಾ ಕ್ರಮ ವಹಿಸಲು ಬೆಸ್ಕಾಂ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ವಿದ್ಯಾರ್ಥಿಗಳಿಗೆ ಹೆಚ್ಚಿನ ಬಸ್ ವ್ಯವಸ್ಥೆ, ಪರೀಕ್ಷಾ ಕೇಂದ್ರದಲ್ಲಿ ವಿಕಲಚೇತನರಿಗೆ ಸಾಧನ ಸಲಕರಣೆ ವ್ಯವಸ್ಥೆ ಕಲ್ಪಿಸಲಾಗಿದೆ. ಪರೀಕ್ಷಾ ಕೇಂದ್ರದಲ್ಲಿ ಆರೋಗ್ಯ ಸಿಬ್ಬಂದಿ ನೇಮಿಸಲಾಗಿದೆ.

## ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆ

# ಜಿಲ್ಲೆಗೆ ಶೇ.63.21 ರಷ್ಟು ಫಲಿತಾಂಶ

» ಚಿತ್ರದುರ್ಗ

2024–25ನೇ ಸಾಲಿನ ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆ ಫಲಿತಾಂಶ ಪ್ರಕಟವಾಗಿದ್ದು, ಜಿಲ್ಲೆಗೆ ಶೇ.63.21 ರಷ್ಟು ಫಲಿತಾಂಶ ಲಭಿಸಿದೆ. ಜಿಲ್ಲೆಯಲ್ಲಿ ಒಟ್ಟು 21,481 ವಿದ್ಯಾರ್ಥಿ ಪರೀಕ್ಷೆ ಬರೆದಿದ್ದು, ಈ ಪೈಕಿ 13,579 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. 10,645 ಬಾಲಕರ ಪೈಕಿ 5,681 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದರೆ, 10,836 ಬಾಲಕಿಯರ ಪೈಕಿ 7,898 ವಿದ್ಯಾರ್ಥಿನಿಯರು ಉತ್ತೀರ್ಣರಾಗಿದ್ದು, ಬಾಲಕಿಯರು ಮೈಲುಗೈ ಸಾಧಿಸಿದ್ದಾರೆ. 2023–24ನೇ ಸಾಲಿನ ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆಯಲ್ಲಿ ಜಿಲ್ಲೆಗೆ ಶೇ.72.85 ಫಲಿತಾಂಶ ದೊರಕಿತ್ತು. ಕಳೆದ ಬಾರಿಗೆ ಹೋಲಿಸಿದರೆ 2024–25ನೇ ಸಾಲಿನಲ್ಲಿ ಶೇ. 9.64 ರಷ್ಟು ಫಲಿತಾಂಶ ಕುಸಿತ ಕಂಡಿದೆ. ರಾಜ್ಯದಲ್ಲಿ ಚಿತ್ರದುರ್ಗ ಜಿಲ್ಲೆ 23ನೇ ಸ್ಥಾನ ಪಡೆದಿದೆ.

ಜಿಲ್ಲೆಯ ತಾಲ್ಲೂಕುಗಳ ಪೈಕಿ ಹೊಳಲ್ಕೆರೆ ತಾಲ್ಲೂಕು ಶೇ66.75, ಹಿರಿಯೂರು ಶೇ.65.64, ಚಳ್ಳಕೆರೆ ಶೇ.62.92, ಮೊಳಕಾಲ್ಮೂರು ಶೇ.62.63, ಚಿತ್ರದುರ್ಗ 62.13, ಹೊಸದುರ್ಗ ಶೇ.60.38 ರಷ್ಟು ಫಲಿತಾಂಶ ಪಡೆದಿವೆ.

ಸರ್ಕಾರಿ ಶಾಲೆಗಳು ಶೇ.62.37, ಅನುದಾನಿ ಶಾಲೆಗಳು ಶೇ.55.49 ಹಾಗೂ ಅನುದಾನ ರಹಿತ ಖಾಸಗಿ ಶಾಲೆಗಳು ಶೇ.75.60 ರಷ್ಟು ಫಲಿತಾಂಶ ದಾಖಲಿಸಿವೆ.




ಗ್ರಾಮೀಣ ಪ್ರದೇಶದ ಶಾಲೆಗಳ ಮಕ್ಕಳು ಶೇ.64.67, ನಗರ ಪ್ರದೇಶದ ಮಕ್ಕಳು ಶೇ.59.76 ರಷ್ಟು ಉತ್ತೀರ್ಣಗೊಂಡಿದ್ದು, ನಗರ ಪ್ರದೇಶಕ್ಕೆ ಹೋಲಿಸಿದರೆ ಗ್ರಾಮೀಣ ಪ್ರದೇಶದ ಮಕ್ಕಳು ಉತ್ತಮ ಸಾಧನೆ ತೋರಿದ್ದಾರೆ.

ಒಟ್ಟು 332 ವಿದ್ಯಾರ್ಥಿಗಳು 625ಕ್ಕೆ 600 ಹೆಚ್ಚು ಅಂಕಗಳನ್ನು ಪಡೆದಿದ್ದು, ಹಿರಿಯೂರು ನಗರದ ರಾಷ್ಟ್ರೀಯ ಅಕಾಡೆಮಿ ಇಂಗ್ಲೀಷ್ ಮೀಡಿಯಂ ಶಾಲೆಯ ವಿದ್ಯಾರ್ಥಿಗಳಾದ ಮೌಲ್ಯ ಡಿ ರಾಜ್ ಹಾಗೂ ನಂದನ್ .ಹೆಚ್.ಓ 625 ಅಂಕ, ಇಂಚರ.ಆರ್ 623 ಅಂಕಗಳನ್ನು ಗಳಿಸಿ ಜಿಲ್ಲೆಗೆ ಕೀರ್ತಿ ತಂದಿದ್ದಾರೆ. ಜಿಲ್ಲಾ ಮಟ್ಟದಲ್ಲಿ ಅನುಕ್ರಮವಾಗಿ ಪ್ರಥಮ, ದ್ವಿತೀಯ ಹಾಗೂ ತೃತೀಯ ಸ್ಥಾನ ಗಳಿಸಿದ್ದಾರೆ.

ಚಳ್ಳಕೆರೆ ತಾಲ್ಲೂಕಿನ ಪೈಕಿ, ಚಿನ್ಮಯ ಇಂಗ್ಲೀಷ್ ಮೀಡಿಯಂ ಶಾಲೆಯ ಡಿ.ಕವನ 622, ವಿದ್ಯಾ ವಿಕಾಸ ಇಂಗ್ಲೀಷ್ ಮೀಡಿಯಂ ಶಾಲೆಯ ರಾಮ್ ಕುಮಾರ್.ಜಿ 622, ವಾಸವಿ ಇಂಗ್ಲೀಷ್ ಮೀಡಿಯಂ ಶಾಲೆಯ ಸಿಂಚನ.ಟಿ 620 ಅಂಕ ಗಳಿಸಿದ್ದಾರೆ.

ಚಿತ್ರದುರ್ಗ ತಾಲ್ಲೂಕಿನ ಪೈಕಿ ಡಿ.ವಿ.ಎಸ್ ಇಂಗ್ಲೀಷ್ ಮೀಡಿಯಂ ಶಾಲೆಯ ಸೃಷ್ಠಿ. ಕೆ.ಎನ್ 622, ವಿದ್ಯಾವಿಕಾಸ ಇಂಗ್ಲೀಷ್ ಮೀಡಿಯಂ ಶಾಲೆಯ ಕಲ್ಯಾಣ ಬಾಬು 622 ಹಾಗೂ ಇಂದು ಕೆ. 621 ಅಂಕಗಳನ್ನು ಪಡೆದಿದ್ದಾರೆ.

ಹಿರಿಯೂರು ತಾಲ್ಲೂಕಿನ ಪೈಕಿ ಜಿಲ್ಲೆಯ ಮಟ್ಟದ ಮೂರು ಸ್ಥಾನಗಳನ್ನು ಪಡೆದ ವಿದ್ಯಾರ್ಥಿಗಳನ್ನು ಹೊರತುಪಡಿಸಿ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ವಿದ್ಯಾರ್ಥಿ ಪ್ರಶಾಂತ ಎನ್.ಎಂ. 621, ರಾಷ್ಟ್ರೀಯ ಅಕಾಡೆಮಿ ಇಂಗ್ಲೀಷ್ ಮೀಡಿಯಂ ಶಾಲೆಯ ವಿಶೇಶ್.ವಿ.ಜೈನ್ ಹಾಗೂ ನಿಶಾಂತ್.ಆರ್.ಎನ್. ತಲಾ 621 ಅಂಕ ಗಳಿಸಿದ್ದಾರೆ.

ಹೊಳಲ್ಕೆರೆ ತಾಲ್ಲೂಕಿನ ಪೈಕಿ ಅಕ್ಷರ ವಿದ್ಯಾ ನಿಕೇತನ ಇಂಗ್ಲೀಷ್ ಮೀಡಿಯಂ ಶಾಲೆಯ ಭಾನು.ಎಸ್.ನ್ 622, ಎಸ್.ಜೆ.ಎಂ.ಇಂಗ್ಲೀಷ್ ಮೀಡಿಯಂ ಶಾಲೆಯ ಶೈಲಜಾ.ಎಸ್ 622 ಹಾಗೂ ನಿಶ್ಚಿತ.ಟಿ.ಆರ್.619 ಅಂಕ ಪಡೆದಿದ್ದಾರೆ.

ಹೊಸದುರ್ಗ ತಾಲ್ಲೂಕಿನ ಪೈಕಿ ಗುಡ್ ಶಫರ್ಡ್ ಇಂಗ್ಲೀಷ್ ಮೀಡಿಯಂ ಶಾಲೆಯ ಚಿರಾಕ್ಷಾ.ಬಿ.ಜಿ 621, ಸೈಂಟ್ ಅಂಟೋನಿ ಶಾಲೆಯ ತನು.ಹೆಚ್.ಎನ್, 620, ಗುಡ್ ಶಫರ್ಡ್ ಇಂಗ್ಲೀಷ್ ಮೀಡಿಯಂ ಶಾಲೆಯ ಹರ್ಷಿತಾ.ವಿ 619 ಅಂಕ ಗಳಿಸಿದ್ದಾರೆ.

ಮೊಳಕಾಲ್ಮೂರು ತಾಲ್ಲೂಕಿನ ಪೈಕಿ ಆದರ್ಶ ವಿದ್ಯಾಲಯದ ಗುರುಸ್ವಾಮಿ. ಹೆಚ್.ಸಿ 622, ಶ್ರೀ.ಶಾಂತಿನಿಕೇತನ ಇಂಗ್ಲೀಷ್ ಮೀಡಿಯಂ ಶಾಲೆಯ 620, ಆದರ್ಶ ವಿದ್ಯಾಲಯದ ಮಿಸ್ಬಾ ತೋಹಿದ್ 617 ಅಂಕ ಪಡೆದಿದ್ದಾರೆ.

ಚಿತ್ರದುರ್ಗ ಮದೆಹಳ್ಳಿಯ ಶ್ರೀ ಸಿದ್ದೇಶ್ವರ ಪ್ರೌಢಶಾಲೆ, ಹಿರಿಯೂರು ವೇದಾವತಿ ನಗರದ ಎಸ್.ಜೆ.ಆರ್. ಹೈಸ್ಕೂಲ್, ಹೊಸದುರ್ಗ ತಾಲ್ಲೂಕಿನ ಗವಿರಂಗಪುರ ಗ್ರಾಮದ ಶ್ರೀ.ಗವಿರಂಗನಾಥ ಸಂಯುಕ್ತ ಪದವಿ ಪೂರ್ವ ಕಾಲೇಜಿನ ಪೌಢಶಾಲೆ ವಿಭಾಗ, ಹೊನ್ನೇನಹಳ್ಳಿ ಶ್ರೀ.ಆಂಜನೇಯ ಗ್ರಾಮಾಂತರ ಪ್ರೌಢಶಾಲೆಗಳು ಶೂನ್ಯ ಫಲಿತಾಂಶ ದಾಖಲಿಸಿವೆ.

ಜಿಲ್ಲೆಯ ಎಲ್ಲಾ ಎಸ್.ಎಸ್.ಎಲ್.ಸಿ ಪರೀಕ್ಷೆ ಕೇಂದ್ರಗಳಲ್ಲಿ ಪರೀಕ್ಷಾ ವೇಳೆ ವೆಬ್ ಕಾಸ್ಟಿಂಗ್ ಮಾಡಲಾಗಿದೆ. ಯಾವುದೇ ಗ್ರೇಸ್ ಮಾರ್ಕ್ಸ್‌ಗಳನ್ನು ವಿದ್ಯಾರ್ಥಿಗಳಿಗೆ ನೀಡಿಲ್ಲ. ಇದು ನೈಜ ಫಲಿತಾಂಶವಾಗಿದೆ. ಗ್ರಾಮೀಣ ಪ್ರದೇಶ ಹಾಗೂ ವಿದ್ಯಾರ್ಥಿನಿಯರು ಪರೀಕ್ಷೆಯಲ್ಲಿ ಮೇಲುಗೈ ಸಾಧಿಸಿದ್ದಾರೆ ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದ್ದಾರೆ.

ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆ ಫಲಿತಾಂಶದಲ್ಲಿ ಚಿತ್ರದುರ್ಗ ಜಿಲ್ಲೆ ರಾಜ್ಯಕ್ಕೆ 23ನೇ ಸ್ಥಾನ ಗಳಿಸಿದೆ. 2023–24ನೇ ಸಾಲಿನ ರಾಜ್ಯದ ಒಟ್ಟಾರೆ ಫಲಿತಾಂಶ ಶೇ.73 ರಷ್ಟು ಇತ್ತು. ಈ ಬಾರಿ ಶೇ.66ಕ್ಕೆ ಕುಸಿದಿದೆ. ಇದೇ ಮಾದರಿಯಲ್ಲಿ ಜಿಲ್ಲೆಯ ಫಲಿತಾಂಶ ಕಳೆದ ಬಾರಿ ಶೇ.72 ರಷ್ಟು ಇದ್ದದ್ದು, ಈ ಬಾರಿ ಶೇ.63.21ಕ್ಕೆ ಕುಸಿದಿದೆ. ಬಾರಿ ರಾಜ್ಯದ ಸರಾಸರಿಗಿಂತಲೂ ಜಿಲ್ಲೆಯಲ್ಲಿ ಶೇ.2.79 ಫಲಿತಾಂಶ ದಾಖಲಾಗಿದೆ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಉಪನಿರ್ದೇಶಕ ಎಂ.ಆರ್. ಮಂಜುನಾಥ ತಿಳಿಸಿದ್ದಾರೆ.

# ಕಡ್ಲೆಗುದ್ದು ವಸತಿ ಶಾಲೆ: 100% ಫಲಿತಾಂಶ

» ಚಿತ್ರದುರ್ಗ

ಸಿರಿಗೆರೆ ಸಮೀಪದ ಕಡ್ಲೆಗುದ್ದು ಗ್ರಾಮದ ಇಂಧಿರಾಗಾಂಧಿ ವಸತಿ ಶಾಲೆ(ಪ.ಜಾತಿ) ಯಲ್ಲಿ 2024–25ನೇ ಸಾಲಿನಲ್ಲಿ ಎಸ್.ಎಸ್.ಎಲ್.ಸಿ ವಿದ್ಯಾಭ್ಯಾಸ ಮಾಡುತ್ತಿದ್ದ ಎಲ್ಲ 46 ವಿದ್ಯಾರ್ಥಿಗಳು ವಾರ್ಷಿಕ ಪರೀಕ್ಷೆಯಲ್ಲಿ ಉತ್ತೀರ್ಣರಾಗುವ ಶೇ.100 ರಷ್ಟು ಫಲಿತಾಂಶ ದಾಖಲಾಗಿದೆ. ವಸತಿ ಶಾಲೆ ಸತತ ನಾಲ್ಕನೇ ಬಾರಿ ಶೇಕಡ 100% ಫಲಿತಾಂಶ ಪಡೆದ ಶ್ರೇಯಕ್ಕೆ ಪಾತ್ರರಾಗಿದೆ. 18 ವಿದ್ಯಾರ್ಥಿಗಳು ಅತ್ಯುನ್ನತ ಹಾಗೂ 25 ವಿದ್ಯಾರ್ಥಿಗಳು ಪ್ರಥಮ ಶ್ರೇಣಿ ಹಾಗೂ 3 ವಿದ್ಯಾರ್ಥಿಗಳು ದ್ವಿತೀಯ ಶ್ರೇಣಿ ಪಡೆದಿದ್ದಾರೆ. 625 ಅಂಕಗಳಿಗೆ ವಸತಿಯ ಶಾಲೆ ವಿನಯ್ ಕೆ 616, ಲೀಲಾವತಿ ಜಿ 591, ದೇವರಾಜ ಸಿ ರವರು 589, ಪ್ರಜ್ವಲ್ ಎಸ್.ವಿ 589, ಕಾರ್ತಿಕ್ ಆರ್ 584 ಅಂಕಗಳನ್ನು ಪಡೆದು ಶಾಲೆಯ ಕೀರ್ತಿಯನ್ನು ಹೆಚ್ಚಿಸಿದ್ದಾರೆ.

ಸಮಾಜ ಕಲ್ಯಾಣ ಇಲಾಖೆಯ ಕ್ರೈಸ್ ವ್ಯಾಪಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ವಸತಿ ಶಾಲೆಯು 2017–18ನೇ ಸಾಲಿನಲ್ಲಿ ಆರಂಭವಾಗಿದೆ. 2022–23ನೇ ಸಾಲಿನಲ್ಲಿ ಕಡ್ಲೆಗುದ್ದುವಿನಲ್ಲಿ 9ಎಕರೆ ವಿಸ್ತೀರ್ಣ ಜಾಗದಲ್ಲಿ ಅತ್ಯಾಧುನಿಕ ಸಕಲ ಸೌಕರ್ಯಗಳನ್ನು ಹೊಂದಿರುವ ಅತ್ಯಾಕರ್ಷಕ ಕ್ಯಾಂಪಸ್ ನಿರ್ಮಿಸಲಾಗಿರುತ್ತದೆ. ಶೈಕ್ಷಣಿಕ ವಿಭಾಗ, ವಿದ್ಯಾರ್ಥಿ ಮತ್ತು ವಿದ್ಯಾರ್ಥಿನಿಯರಿಗೆ ಪ್ರತ್ಯೇಕ ವಸತಿ ನಿಲಯ, ಭೋಜನ ಶಾಲೆ, ಪ್ರಾಂಶುಪಾಲರ ವಸತಿ ಗೃಹ ಹಾಗೂ ಬೋಧಕ, ಬೋಧಕೇತರ ವಸತಿ ಗೃಹಗಳನ್ನು ನಿರ್ಮಿಸಲಾಗಿರುತ್ತದೆ. ಗ್ರಾಮೀಣ ಪ್ರದೇಶದ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗದ ವಿದ್ಯಾರ್ಥಿಗಳನ್ನು ಪ್ರವೇಶ ಪರೀಕ್ಷೆಯ ಮೂಲಕ 6ನೇ ತರಗತಿಗೆ ದಾಖಲಿಸಿಕೊಂಡು 10ನೇ ತರಗತಿಯವರೆಗೆ ವಿದ್ಯಾಭ್ಯಾಸ ನೀಡಲಾಗುತ್ತದೆ. ಪ್ರಸ್ತುತ 246 ವಿದ್ಯಾರ್ಥಿಗಳು ವಿದ್ಯಾ ಭ್ಯಾಸ ಮಾಡುತ್ತಿದ್ದಾರೆ.ಸರ್ಕಾರದ ಆದೇಶದಂತೆ ಪ್ರವೇಶ, ಶಿಕ್ಷಣ, ವಸತಿ, ಊಟೋಪಚಾರದ ವ್ಯವಸ್ಥೆ ಮಾಡಲಾಗುತ್ತಿದೆ. ಎಲ್ಲಾ ವಿದ್ಯಾರ್ಥಿಗಳಿಗೆ ಉಚಿತವಾಗಿ ಮೂರು ಜೊತೆ ಸಮವಸ್ತ್ರ, ಎರಡು ಜೊತೆ ಶೂ, ಪಠ್ಯಪುಸ್ತಕ, ನೋಟ್ ಬುಕ್ ಹಾಗೂ ಲೇಖನಸಾಮಗ್ರಿಗಳನ್ನುಒದಗಿಸಲಾಗುತ್ತಿದೆ. ಕಂಪ್ಯೂಟರ್ ಮತ್ತು ಡ್ರಾಯಿಂಗ್ ಶಿಕ್ಷಣ ಕಲಿಸಲಾಗುತ್ತಿದೆ. ವಿವಿಧ ಎನ್‌ಜಿಓಗಳ ಸಹಕಾರದೊಂದಿಗೆ ವಿದ್ಯಾರ್ಥಿಗಳನ್ನು ಪಠ್ಯ ಮತ್ತು ಪಠ್ಯೇತರ ಚಟುವಟಿಕೆಯಲ್ಲಿ ತೊಡಗಿಸಿ ವಿದ್ಯಾರ್ಥಿಗಳ ಸರ್ವಾಂಗೀಣ ವ್ಯಕ್ತಿತ್ವ ರೂಪಿಸಲು ಶ್ರಮಿಸಲಾಗುತ್ತದೆ. ಸರ್ಕಾರ ಮತ್ತು ಕ್ರೈಸ್ ಕೇಂದ್ರ ಕಛೇರಿಯ ಉನ್ನತ ಅಧಿಕಾರಗಳು ಹಾಗೂ ಜಂಟಿ ನಿರ್ದೇಶಕರು ಸಮಾಜ ಕಲ್ಯಾಣ ಇಲಾಖೆ ಚಿತ್ರದುರ್ಗ ಇವರ ಮಾರ್ಗದರ್ಶನ ಮತ್ತು ಆದೇಶದಂತೆ ಜೂನ್ ಮಾಹೆಯಿಂದಲೆ ಉತ್ತಮ ಫಲಿತಾಂಶ ಪಡೆಯಲು ವಿವಿಧ ಕಾರ್ಯಕ್ರಮಗಳನ್ನು ರೂಪಿಸಿ, ವಿದ್ಯಾರ್ಥಿಗಳನ್ನು ಪಠ್ಯ ಮತ್ತು ಪಠ್ಯೇತರ ಚಟುವಟಿಯಲ್ಲಿ ತೊಡಗಿಸಿದ್ದರಿಂದ ಈ ಫಲಿತಾಂಶ ಪಡೆಯಲು ಸಾಧ್ಯವಾಗಿದೆ ಎಂದು ಪ್ರಾಂಶುಪಾಲ ರಮೇಶ್ ಆರ್ ಅಭಿಪ್ರಾಯ ಪಟ್ಟಿದ್ದಾರೆ. ಮಾರ್ಗದರ್ಶನ ಮಾಡಿದ ಮೇಲಾಧಿಕಾರಿಗಳಿಗೆ ಧನ್ಯವಾದ ಹಾಗೂ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳಿಗೆ ಪ್ರಾಂಶುಪಾಲ ರಮೇಶ್.ಆರ್ ಶುಭಾಷಯಗಳನ್ನು ಕೋರಿದ್ದಾರೆ.





## ಎಸ್‌ಎಸ್‌ಎಲ್‌ಸಿ ಫಲಿತಾಂಶ ಪ್ರಕಟ: ತಾಲ್ಲೂಕಿನಾದ್ಯಂತ ಶೇ.62.92 ಸಾಧನೆ

» ಚಳ್ಳಕೆರೆ





ಪ್ರಸ್ತುತ 2024–25ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆ ಫಲಿತಾಂಶ ಪ್ರಕಟವಾಗಿದ್ದು, ಪ್ರಸ್ತುತ ವರ್ಷ ತಾಲ್ಲೂಕಿನಾದ್ಯಂತ ಒಟ್ಟು ಶೇ.62.92ಸಾಧನೆ ಮಾಡಲಾಗಿದೆ. ಫಲಿತಾಂಶ ಕೊಂಚ ಕಡಿಮೆಯಾದರೂ ಕಳಪೆಯಾಗಿಲ್ಲವೆಂದು ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ತಿಳಿಸಿದ್ದಾರೆ. ಅವರು, ಈ ಬಗ್ಗೆ ಪತ್ರಿಕೆಗೆ ಮಾಹಿತಿ ನೀಡಿ, ಪ್ರಸ್ತುತ ವರ್ಷ ಎಸ್‌ಎಸ್‌ಎಲ್‌ಸಿ ಪರೀಕ್ಷೆಗೆ ಒಟ್ಟು 4782 ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದು ಆ ಪೈಕಿ 3009 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ಶೇ.62.92 ಸಾಧನೆಯಾಗಿದೆ. ಚಳ್ಳಕೆರೆ ನಗರದ ಚಿನ್ಮಯಿ ಆಂಗ್ಲಮಾಧ್ಯಮ ಶಾಲೆಯ ಡಿ.ಕವನ–625ಕ್ಕೆ 622 ಅಂಕ ಪಡೆದು ತಾಲ್ಲೂಕಿನ ಟಾಪ್‌ರಾಗಿ ಹೊರಹೊಮ್ಮಿದ್ದಾಳೆ, ನಾಯಕನಹಟ್ಟಿಯ ವಿದ್ಯಾವಿಕಾಸ ಆಂಗ್ಲಮಾಧ್ಯಮ ಶಾಲೆಯ ಜಿ.ರಾಮ್‌ಕುಮಾರ್–625ಕ್ಕೆ 622 ಪಡೆದಿದ್ದಾನೆ. ನಗರದ ವಾಸವಿ ಪ್ರೌಢಶಾಲೆಯ ಟಿ.ಸಿಂಚನ–620, ಎಚ್.ಪಿ.ಮೈತ್ರಿ–618 ಅಂಕ ಪಡೆದು ಉತ್ತಮ ಸಾಧನೆ ಮಾಡಿದ ವಿದ್ಯಾರ್ಥಿಗಳಾಗಿದ್ದಾರೆ. ತಾಲ್ಲೂಕಿನ ಸರ್ಕಾರಿ ಶಾಲೆಯ ಫಲಿತಾಂಶದಲ್ಲಿ ನಗರದ ಹೆಗ್ಗೆರೆ ತಾಯಮ್ಮ ಸರ್ಕಾರಿ ಪ್ರೌಢಶಾಲೆಯ ವಿದ್ಯಾರ್ಥಿನಿ ಎಂ.ಸೌಮ್ಯ–615, ಆದರ್ಶ ಶಾಲೆಯ ಎಂ.ಎ.ಕುಶಾಲ್–613, ಸಂಜನ–610 ಅಂಕ ಪಡೆದು ತಾಲ್ಲೂಕಿನ ಉತ್ತಮ ಸಾಧನೆಗೈದ ವಿದ್ಯಾರ್ಥಿಗಳಾಗಿದ್ದಾರೆ. ಉಳಿದಂತೆ ಹೆಗ್ಗೆರೆ ತಾಯಮ್ಮ ಸರ್ಕಾರಿ ಪ್ರೌಢಶಾಲೆಯಲ್ಲಿ ಎಂ.ಮಾನಸ–610, ಎಂ.ಐಶ್ವರ್ಯ–597, ಎಂ.ದರ್ಶಿನಿ–588 ಅಂಕ ಪಡೆದಿದ್ದಾರೆ. ಒಟ್ಟು 131 ವಿದ್ಯಾರ್ಥಿಗಳು ಶಾಲೆಯಲ್ಲಿ ಉತ್ತೀರ್ಣರಾಗಿದ್ದಾರೆಂದು ಶಾಲೆಯ ಮುಖ್ಯೋಪಾಧ್ಯಾಯ ವೀರಣ್ಣ, ಬಿ.ರಾಜಕುಮಾರ್ ಮಾಹಿತಿ ನೀಡಿದ್ದಾರೆ.

# ನಗರಸಭೆ ನೂತನ ಉಪಾಧ್ಯಕ್ಷೆಯಾಗಿ ಕವಿತಾ ಅವಿರೋಧ ಆಯ್ಕೆ

» ಚಳ್ಳಕೆರೆ

ನಗರಸಭೆಯಉಪಾಧ್ಯಕ್ಷರಾಗಿಕಾರ್ಯನಿರ್ವಹಿಸುತ್ತಿದ್ದ ಸುಮಭರಮಣ್ಣ ರಾಜೀನಾಮೆ ಹಿನ್ನೆಲೆಯಲ್ಲಿ ಉಪಾಧ್ಯಕ್ಷ ಸ್ಥಾನಕ್ಕೆ ಶುಕ್ರವಾರ ಚುನಾವಣೆ ನಡೆದಿದ್ದು ಚುನಾವಣಾಧಿಕಾರಿಯಾಗಿ ಉಪವಿಭಾಗಾಧಿಕಾರಿ ಮಹಿಬೂಬ್‌ಜೀಲಾನಿ ಕಾರ್ಯನಿರ್ವಹಿಸಿದರು.

ಉಪಾಧ್ಯಕ್ಷ ಸ್ಥಾನಕ್ಕೆ ನಾಮಪತ್ರ ಸಲ್ಲಿಸುವ ಸಂದರ್ಭದಲ್ಲಿ ಚಳ್ಳಕೆರೆ ನಗರದ 6ನೇ ವಾರ್ಡ್ ಸದಸ್ಯ ಕವಿತಾಬೋರಯ್ಯ ಮಾತ್ರ ನಾಮಪತ್ರ ಸಲ್ಲಿಸಿದ್ದು, ಬೇರೆಯಾರೂ ನಾಮಪತ್ರ ಸಲ್ಲಿಸಿದ ಕಾರಣ ಕವಿತಾಬೋರಯ್ಯ ಉಪಾಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾದರು ಎಂದು ಚುನಾವಣಾಧಿಕಾರಿ ಘೋಷಿಸಿದರು.



ಉಪಾಧ್ಯಕ್ಷರಾಗಿ ಕವಿತಾಬೋರಯ್ಯ ಹೆಸರು ಘೋಷಣೆಯಾಗುತ್ತಲೇ ಬೆಂಬಲಿಗರು ಪಟಾಕಿ ಸಿಡಿಸಿ, ಸಿಹಿ ಹಂಚಿ ಸಂಭ್ರಮಿಸಿದರು. ಅಧ್ಯಕ್ಷೆ ಆರ್. ಮಂಜುಳಾ, ಸದಸ್ಯರಾದ ಸುಮ, ಸುಜಾತ, ಸುಮಕ್ಕ, ಜೈತುಂಬಿ, ಶಿಲ್ಪ, ರಮೇಶ್‌ಗೌಡ, ಕೆ.ವೀರಭದ್ರಪ್ಪ, ಹೊಯ್ಸಳಗೋವಿಂದ, ವಿರೂಪಾಕ್ಷ, ಎಂ.ಜೆ. ರಾಘವೇಂದ್ರ, ಶಿವಕುಮಾರ್, ನಾಮಿನಿ ಸದಸ್ಯರಾದ ಬಡಗಿಪಾಪಣ್ಣ, ಆರ್.ವೀರಭದ್ರಪ್ಪ, ನಟರಾಜ್, ಅನ್ವರ್‌ಮಾಸ್ಟರ್, ಕಾಂಗ್ರೆಸ್ ಪಕ್ಷದ ಮುಖಂಡರಾದ ಕೃಷ್ಣ, ಆರ್.ಪ್ರಸನ್ನಕುಮಾರ್, ಮಹಿಳಾಘಟಕದ ಅಧ್ಯಕ್ಷೆ ಗೀತಾಬಾಯಿ, ರುದ್ರಮುನಿ, ಪ್ರಹ್ಲಾದ್, ಬೋರಯ್ಯ ಮುಂತಾದವರು ನೂತನ ಉಪಾಧ್ಯಕ್ಷರನ್ನು ಅಭಿನಂದಿಸಿದರು.


ಪುಟ 2

## ಫಾಸ್ಟ್ ನ್ಯೂಸ್

### ಹಿರೇಗುಂಟನೂರು ಗ್ರಾಮದಲ್ಲಿ ಎನ್.ಎಸ್.ಎಸ್ ಶಿಬಿರ

» ಚಿತ್ರದುರ್ಗ

ಸರ್ಕಾರಿ ಕಲಾ ಕಾಲೇಜಿನ ರಾಷ್ಟ್ರೀಯ ಸೇವಾ ಯೋಜನೆ ಘಟಕ 01 ಹಾಗೂ 02 ವತಿಯಿಂದ ಚಿತ್ರದುರ್ಗ ತಾಲ್ಲೂಕಿನ ಹಿರೇಗುಟನೂರು ಗ್ರಾಮದಲ್ಲಿ ಮೇ 3 ರಿಂದ 9 ವರೆಗೆ 2024-25ನೇ ಸಾಲಿನ ಎನ್.ಎಸ್.ಎಸ್ ಶಿಬಿರ ಆಯೋಜಿಸಲಾಗಿದೆ. ವಿಕಸಿತ ಭಾರತ ಸೌಹಾರ್ದ ಭಾರತ ಎಂಬ ಧ್ಯೇಯದೊಂದಿಗೆ ಶಿಬಿರ ಆಯೋಜಿಸಲಾಗಿದ್ದು, ಮೇ.3 ರಂದು ಬೆಳಿಗ್ಗೆ 11 ಗಂಟೆಗೆ ಶಿಬಿರಾರ್ಥಿಗಳ ನೊಂದಣಿ ಮಾಡಿಕೊಳ್ಳಲಾಗುವುದು. ಮಧ್ಯಾಹ್ನ 3 ಗಂಟೆಗೆ ಗ್ರಾಮದಲ್ಲಿ ಪಥ ಸಂಚಲನ ಮತ್ತು ಜಾಗೃತಿ ಜಾಥಾ ನಡೆಸಲಾಗುವುದು. ಸಂಜೆ 7 ಗಂಟೆಗೆ ಉದ್ಘಾಟನಾ ಕಾರ್ಯಕ್ರಮ ನಡೆಯಲಿದ್ದು, ಶಾಸಕ ಕೆ.ಸಿ.ವಿರೇಂದ್ರ ಪಪ್ಪಿ ಶಿಬಿರ ಉದ್ಘಾಟಿಸುವರು. ವಿಶೇಷ ಆಹ್ವಾನಿತರಾಗಿ ವಿಧಾನ ಪರಿಷತ್ ಶಾಸಕ ಕೆ.ಎಸ್.ನವೀನ್ ಪಾಲ್ಗೊಳ್ಳುವರು. ಪ್ರಾಂಶುಪಾಲ ಬಿ.ಟಿ.ತಿಪ್ಪೇರುದ್ರಸ್ವಾಮಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ಮೇ.4 ರಿಂದ 8 ವರೆಗೆ ವಿದ್ಯಾರ್ಥಿಗಳ ವ್ಯಕ್ತಿತ್ವ ವಿಕಸನಗೊಳಿಸಲು ಅನೇಕ ವೈವಿಧ್ಯಮಯ ಕಾರ್ಯಕ್ರಮಗಳನ್ನು ಎನ್.ಎಸ್.ಎಸ್. ಶಿಬಿರದಲ್ಲಿ ಆಯೋಜಿಸಲಾಗಿದೆ. ಮೇ.9 ಬೆಳಿಗ್ಗೆ 10 ಗಂಟೆಗೆ ಸಮಾರೋಪ ಸಮಾರಂಭ ನಡೆಯಲಿದೆ. ಕಾಲೇಜು ಶಿಕ್ಷಣ ಇಲಾಕೆ ಜಂಟಿ ನಿರ್ದೇಶಕ ಪ್ರೋ ಸಿ.ಕೆ.ಮಹೇಶ್ವರ ಸಮಾರೋಪ ಭಾಷಣ ಮಾಡುವರು. ಎನ್.ಎಸ್.ಎಸ್. ದಾವಣಗೆರೆ ವಿಭಾಗದ ಕಾರ್ಯಕ್ರಮ ಸಂಯೋಜನಾಧಿಕಾರಿ ಡಾ.ಅಶೋಕ ಕುಮಾರ ವಿ.ಪಾಳೇದ ವಿಶೇಷ ಆಹ್ವಾನಿತರಾಗಿ ಭಾಗವಹಿಸುವರು.

### ನವೀಕೃತ ವಕೀಲರ ಭವನದ ಉದ್ಘಾಟನೆ

» ಚಿತ್ರದುರ್ಗ

ಜಿಲ್ಲಾ ನ್ಯಾಯಾಂಗ, ಜಿಲ್ಲಾ ವಕೀಲರ ಸಂಘ(ರಿ), ಲೋಕೋಪಯೋಗಿ ಇಲಾಖೆ ಮತ್ತು ಜಿಲ್ಲಾ ಖನಿಜ ಪ್ರತಿಷ್ಠಾನ, ಜಿಲ್ಲಾಡಳಿತದ ಸಂಯುಕ್ತ ಆಶ್ರಯದಲ್ಲಿ, ಮೇ.3 ಶನಿವಾರದಂದು ಸಂಜೆ 4 ಗಂಟೆಗೆ ನಗರದ ಜಿಲ್ಲಾ ವಕೀಲರ ಭವನದಲ್ಲಿ, ನವೀಕೃತ ವಕೀಲರ ಭವನದ ಉದ್ಘಾಟನೆ ಹಾಗೂ ವಕೀಲರ ತಾತ್ಕಾಲಿಕ ಗಣಕೀಕೃತ ಕೋಠಡಿಯ ಶಂಕುಸ್ಥಾಪನೆ ಸಮಾರಂಭ ಆಯೋಜಿಸಲಾಗಿದೆ. ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷ ರೋಣ ವಾಸುದೇವ ನವೀಕೃತ ವಕೀಲ ಭವನ ಉದ್ಘಾಟಿಸುವರು. ಸಂಸದ ಗೋವಿಂದ ಎಂ. ಕಾರಜೋಳರು ಗಣಕೀಕೃತ ಕೊಠಡಿಯ ಶಂಕುಸ್ಥಾಪನೆ ನೆರವೇರಿಸುವರು. ವಕೀಲರ ಸಂಘದ ಅಧ್ಯಕ್ಷ ವೈ. ತಿಪ್ಪೆಸ್ವಾಮಿ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಜಿಲ್ಲಾಧಿಕಾರಿ ಟಿ. ವೆಂಕಟೇಶ, ಜಿಲ್ಲಾ ವಕೀಲರ ಸಂಘದ ಉಪಾಧ್ಯಕ್ಷ ಬಿ.ಎಂ. ಅನಿಲ್ ಕುಮಾರ್, ಪ್ರಧಾನ ಕಾರ್ಯದರ್ಶಿ ಆರ್. ಗಂಗಾಧರ, ಲೋಕೋಪಯೋಗಿ ಇಲಾಖೆ ಕಾರ್ಯಪಾಲಕ ಅಭಿಯಾಂತರು ಮೋನಪ್ಪ, ನಿರ್ಮಿತಿ ಕೇಂದ್ರ ಯೋಜನಾ ನಿರ್ದೇಶಕ ಬಿ.ಎಸ್. ಹರೀಶ್ ಕುಮಾರ್ ಭಾಗವಹಿಸುವರು. ವಕೀಲರ ಸಂಘದ ಖಜಾಂಚಿ ಬಿ.ಈ. ಪ್ರದೀಪ್ ಮತ್ತು ಜಿಲ್ಲಾ ವಕೀಲರ ಸಂಘದ ಸಹ ಕಾರ್ಯದರ್ಶಿ ಗೀರಿಶ್.ಬಿ.ಮಲ್ಲಾಪುರ ಸೇರಿದಂತೆ ಕಾರ್ಯಕಾರಿ ಸಮಿತಿ ಸದಸ್ಯರು ಹಾಗೂ ಸರ್ವ ಸದಸ್ಯರು ಉಪಸ್ಥಿತರಿರುವರು.

### ಮೇ 22, 23 ರಂದು ರಾಷ್ಟ್ರೀಯ ಕಾರ್ಯಗಾರ

» ದಾವಣಗೆರೆ

ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿ ವತಿಯಿಂದ ಮೇ.22 ಮತ್ತು 23ರಂದು ಅಕಾಡೆಮಿ ಕಚೇರಿಯಲ್ಲಿ "Lakes-2025: Healthy Lakes, Healthy Lives: The Need For Conversation" ಎಂಬ ವಿಷಯಾಧಾರಿತವಾಗಿ ರಾಷ್ಟ್ರೀಯ ಕಾರ್ಯಗಾರವನ್ನು ಆಯೋಜಿಸಲಾಗಿದೆ. ಕಾರ್ಯಗಾರದಲ್ಲಿ ವಿವಿಧ ಪ್ರತಿಷ್ಠಿತ ಸಂಸ್ಥೆಗಳ ಹೆಸರಾಂತ ವಿಜ್ಞಾನಿಗಳು ತಾಂತ್ರಿಕ ಉಪನ್ಯಾಸಗಳನ್ನು ನೀಡಲಿದ್ದು, ಸ್ನಾತಕೋತ್ತರ ವಿಜ್ಞಾನ ವಿದ್ಯಾರ್ಥಿಗಳು, ಸಂಶೋಧನಾ ವಿದ್ಯಾರ್ಥಿಗಳು, ಪ್ರಾಧ್ಯಾಪಕರು, ಯುವ ವಿಜ್ಞಾನಿಗಳು, ಶೈಕ್ಷಣಿಕ ತಜ್ಞರು, ಯುವ ಉದ್ಯಮದಾರರು ಭಾಗವಹಿಸಬಹುದಾಗಿದೆ. ಮತ್ತು ಯುವ ವಿಜ್ಞಾನಿಗಳು ಹಾಗೂ ಸಂಶೋಧನಾ ಅಭ್ಯರ್ಥಿಗಳು ಸಂಶೋಧನಾ ಪ್ರಬಂಧ ಮಂಡಿಸಲು ಅವಕಾಶ ಕಲ್ಪಿಸಲಾಗಿದ್ದು, ಆಯ್ಕೆಯಾದ ಸಂಶೋಧನಾ ಪತ್ರಿಕೆಗಳಿಗೆ ನಗದು ಬಹುಮಾನ ನೀಡಲಾಗುವುದು. ಆಸಕ್ತ ಅಭ್ಯರ್ಥಿಗಳು ಮೇ.17 ರೊಳಗೆ https://forms.gle/qYAgXUbi6iAqUgaH7 ಜಾಲತಾಣದ ಮೂಲಕ ನೊಂದಾಯಿಸಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ ಕಾರ್ಯಗಾರದ ಸಂಯೋಜಕರ ದೂರವಾಣಿಸಂಖ್ಯೆ:9845258894,9620767817 ಮತ್ತು 9611198189 ಗೆ ಅಥವಾ ಅಕಾಡೆಮಿಯ ವೆಬ್‌ಸೈಟ್ https//:kstacademy.in ನ್ನು ವೀಕ್ಷಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

### ನಾಳೆ ಟಿಪ್ಪು ಜಯಂತಿ

» ಚಿತ್ರದುರ್ಗ

ಮೈಸೂರು ಹುಲಿ ಹಜರತ್ ಟಿಪ್ಪುಸುಲ್ತಾನ್‌ರವರ 226 ನೇ ವರ್ಷದ ಹುತಾತ್ಮರ ದಿನಾಚರಣೆಯನ್ನು ಮೇ. 4 ರಂದು ರಾಜ್ಯಾದ್ಯಂತ ಆಚರಿಸಲಾಗುವುದು. ಅಂದು ಬೆಳಿಗ್ಗೆ 8 ಗಂಟೆಗೆ ಚಿತ್ರದುರ್ಗದ ಬಡಾ ಮಕಾನ್‌ನಲ್ಲಿ ಟಿಪ್ಪು ಹುತಾತ್ಮರ ದಿನಾಚರಣೆ ಹಮ್ಮಿಕೊಳ್ಳಲಾಗಿದೆ .

# ನನ್ನ ಸಾಧನೆಗೆ ಕಕ್ಕರಗೊಳ್ಳದ ಜನರು ಕಾರಣ

» ದಾವಣಗೆರೆ



ಕಳೆದ ಒಂದು ದಶಕದಲ್ಲಿ ದೇಶಕ್ಕೆ 1500 ಐಎಎಸ್ ಅಧಿಕಾರಿಗಳನ್ನು ನೀಡಿದ ಹೆಗ್ಗಳಿಕೆ ಇನ್ ಸೈಟ್ಸ್ ಐಎಎಸ್ ಕೋಚಿಂಗ್ ಸಂಸ್ಥೆಯದ್ದು. ಈ ಸಣ್ಣ ಸಾಧನೆ ಮಾಡಲು ಕಾರಣೀಕರ್ತರಾಗಿದ್ದು ನನ್ನೂರು ಕಕ್ಕರಗೊಳ್ಳ ಗ್ರಾಮದ ಜನರು, ಶಿಕ್ಷಕರು, ಕುಟುಂಬದವರು ನೀಡಿದ ಪ್ರೋತ್ಸಾಹ, ಸಹಕಾರವೇ ಕಾರಣ ಎಂದು ಇನ್ ಸೈಟ್ಸ್ ಸಂಸ್ಥೆಯ ಸಂಸ್ಥಾಪಕ ನಿರ್ದೇಶಕ ಹಾಗೂ ಸ್ವಾಭಿಮಾನಿ ಬಳಗದ ರಾಜ್ಯಾಧ್ಯಕ್ಷ ಜಿ. ಬಿ. ವಿನಯ್ ಕುಮಾರ್ ಹೇಳಿದರು.

ದಾವಣಗೆರೆ ತಾಲೂಕಿನ ಕಕ್ಕರಗೊಳ್ಳ ಗ್ರಾಮದೇವತೆ ಊರಮ್ಮದೇವಿ ದೇವಸ್ಥಾನದ ಉದ್ಘಾಟನೆ, ಆಂಜನೇಯಸ್ವಾಮಿ, ಶ್ರೀ ಅರಕೇರಮ್ಮ ದೇವಸ್ಥಾನದ ಗೋಪುರ ಕಳಸಾರೋಹಣ, ಕರ್ನಾಟಕ ಸಾಂಸ್ಕೃತಿಕ ನಾಯಕ ವಿಶ್ವಗುರು ಶ್ರೀ ಬಸವೇಶ್ವರರ ಜಯಂತ್ಯೋತ್ಸ ಹಾಗೂ ಸರ್ವ ಶರಣ ಸಮ್ಮೇಳನದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಇವತ್ತು ನಾನು ಏನೇ ಆಗಿದ್ದರೂ ಊರು ಮರೆಯಲು ಸಾಧ್ಯವಿಲ್ಲ. ಕೇವಲ ಗಾಳಿ, ನೀರು ಮಾತ್ರವಲ್ಲ, ನಾವು ಕಷ್ಟದಲ್ಲಿದ್ದಾಗ ಅನೇಕರು ಸಹಾಯ ಮಾಡಿದ್ದಾರೆ. ಅವರೆಲ್ಲರನ್ನೂ ನೆನಪು ಮಾಡಿಕೊಳ್ಳಲೇಬೇಕು. ಊರಿನ ಶಾಲೆ, ಶಿಕ್ಷಕರು, ಜನರ ಸಹಕಾರದಿಂದ ಈ ಸಣ್ಣ ಸಾಧನೆ ಮಾಡಲು ಸಾಧ್ಯವಾಗಿದೆ. ಕಕ್ಕರಗೊಳ್ಳದ ಅಭಿವೃದ್ಧಿಗೆ ಹಾಗೂ ಸಮಸ್ಯೆಗಳಿಗೆ ಸ್ಪಂದಿಸುವ ಜೊತೆಗೆ ಕೈಯಲ್ಲಾದಷ್ಟು ಸಹಾಯ ಮಾಡುತ್ತೇನೆ ಎಂದು ತಿಳಿಸಿದರು.

ನಾನು ಚಿಕ್ಕವನಿದ್ದಾಗ ಕಕ್ಕರಗೊಳ್ಳ ಗ್ರಾಮದಲ್ಲಿ ಶ್ರೀ ಶಾರದಾ ವಿದ್ಯಾಪೀಠ ಇತ್ತು. ಶಾಲೆಯಲ್ಲಿ ಗುಣಮಟ್ಟದ ಶಿಕ್ಷಣ ದೊರೆಯಿತು. ನನ್ನ ಜೊತೆಗೆ ಮೂವರು ನವೋದಯ ಶಾಲೆಗೆ ಹೋದೆವು. ಆದರ್ಶ್ ಡಾಕ್ಟರ್ ಆಗಿದ್ದರೆ, ಪೂರ್ಣಚಂದ್ರ ತೇಜಸ್ವಿ ಎಂಜಿನಿಯರ್ ಆಗಿದ್ದಾರೆ. ಬೆಂಗಳೂರಿನಲ್ಲಿ ಉನ್ನತ ಮಟ್ಟದಲ್ಲಿ ಇದ್ದಾರೆ. ಇದೆಲ್ಲಾ ಸಾಧ್ಯವಾಗಿದ್ದು ನಮಗೆ ಸಿಕ್ಕ ಉತ್ಕೃಣಟಿಜಜಜುಟಿಜಜಷ್ಟ ಗುಣಮಟ್ಟದ ಶಿಕ್ಷಣ. ಇಂಥ ಶಿಕ್ಷಣ ಗ್ರಾಮದ ಎಲ್ಲಾ ಮಕ್ಕಳಿಗೆ ದೊರೆತರೆ ಭವಿಷ್ಯದಲ್ಲಿ ಅತ್ಯುನ್ನತ ಹುದ್ದೆ ಹೋಗುವ ಜೊತೆಗೆ ಗ್ರಾಮದ ಏಳಿಗೆಗೆ ಶ್ರಮಿಸುತ್ತಾರೆ ಎಂಬುದು ನನ್ನ ಅನಿಸಿಕೆ ಎಂದು ಹೇಳಿದರು.

ನಾನು ಬಿಎಸ್ಸಿ ಮುಗಿಸಿ ಐಎಎಸ್ ಅಧಿಕಾರಿಯಾಗಬೇಕು ಎಂದು ಕನಸು ಕಂಡಿದ್ದೆ. ಇದಕ್ಕಾಗಿ ಪ್ರಯತ್ನಪಟ್ಟೆ. ಸ್ವಲ್ಪದರಲ್ಲಿ ತಪ್ಪಿಹೋಯಿತು. ಆನಂತರ ಕೆಎಎಸ್ ಮಾಡಿದೆ. ಸರ್ಕಾರಿ ಅಧಿಕಾರಿಯೂ ಆದೆ. ಯಾಕೆ ತೃಪ್ತಿ ನೀಡಲಿಲ್ಲ. ಅದಾದ ನಂತರ ನನಗೆ ಹೊಳೆದದ್ದು ಐಎಎಸ್ ಕೋಚಿಂಗ್ ಸೆಂಟರ್ ಆರಂಭಿಸಬೇಕು ಎಂದು. ಇನ್ ಸೈಟ್ಸ್ ಐಎಎಸ್ ಸಂಸ್ಥೆ ಹುಟ್ಟುಹಾಕಿದೆ. ಕಳೆದ ಹತ್ತು ವರ್ಷಗಳ ಹಿಂದೆ ಶುರುವಾದ ಸಂಸ್ಥೆಯು ಈಗ ದೇಶದ ಗಮನವನ್ನೇ ಸೆಳೆಯುತ್ತಿದೆ. ಜಮ್ಮುಕಾಶ್ಮೀರದ ಶ್ರೀನಗರ, ದೆಹಲಿ, ಬೆಂಗಳೂರು, ಹೈದರಾಬಾದ್, ಲಖ್ನೋ, ದಾವಣಗೆರೆಯಲ್ಲಿ ಇನ್ ಸೈಟ್ಸ್ ಐಎಎಸ್ ಕೋಚಿಂಗ್ ಸೆಂಟರ್ ಆರಂಭಿಸಲಾಗಿದೆ. ಕರ್ನಾಟಕದ ಟಾಪರ್ ರಂಗಮಂಜು ಭಾರತಕ್ಕೆ 24ನೇ ರ್ಯಾಂಕ್ ಪಡೆದಿದ್ದು, ಈತ ನನ್ನ ವಿದ್ಯಾರ್ಥಿ.ನನ್ನ ಸಂಸ್ಥೆಯಲ್ಲಿ ಓದಿದವರು ಎಂಬುದು ನನಗೆ ಹೆಮ್ಮೆಯ ವಿಚಾರ ಎಂದು ತಿಳಿಸಿದರು.

ನಮ್ಮೂರಿಗೆ ಪ್ರತಿ ಬಾರಿಯೂ ಬಂದಾಗ ಸಂತೋಷವಾಗುತ್ತದೆ. ಸುಂದರವಾದ ದೇವಸ್ಥಾನ ನಿರ್ಮಾಣವಾಗಿರುವುದು ಖುಷಿಯ ವಿಚಾರ. ನಮ್ಮೂರಿಗೆ ಕೊಡುಗೆ ನೀಡಬೇಕೆಂಬ ಆಸೆ ಮೊದಲಿನಿಂದಲೂ ಇತ್ತು. ಯಾವ ರೀತಿ ನೀಡಬೇಕೆಂಬ ಗೊಂದಲವೂ ಇತ್ತು. ದೇವಸ್ಥಾನದ ಅಭಿವೃದ್ಧಿಗೆ ಕಕ್ಕರಗೊಳ್ಳ ಗ್ರಾಮಸ್ಥರು ಕೇಳಿದಾಗ ನನ್ನ ಕೈಯಲ್ಲಾದಷ್ಟು ಸಹಾಯ ಮಾಡಿದ್ದು ತೃಪ್ತಿ ತಂದಿದೆ. ನಮ್ಮೂರಿನಿಂದ ಸಿಕ್ಕಂಥ ಶಿಕ್ಷಣ ಎಂದಿಗೂ ಮರೆಯಲಾಗದು. ತಂದೆ ಮತ್ತು ಮಾವ ಪುಸ್ತಕ ಖರೀದಿಸಿ ತರುತ್ತಿದ್ದರು. ಈ ಪುಸ್ತಕಗಳನ್ನು ಓದುವ ಹವ್ಯಾಸ ರೂಢಿಸಿಕೊಂಡಿದ್ದರಿಂದ ಜ್ಞಾನವು ಸಿಕ್ಕಿತು. ಈ ಜ್ಞಾನವೇ ವನ ರೂಪಿಸಿಕೊಳ್ಳಲು ಮಾರ್ಗ ತೋರಿಸಿತು ಎಂದು ನೆನಪು ಮಾಡಿಕೊಂಡರು.

ಕಕ್ಕರಗೊಳ್ಳ ಗ್ರಾಮದ ಎಲ್ಲಾ ಮಕ್ಕಳಿಗೂ ಒಳ್ಳೆಯ ಶಿಕ್ಷಣ. ವ್ಯವಸ್ಥೆ ಸಿಗುವಂತಾಗಬೇಕು. ಮಕ್ಕಳಲ್ಲಿ ಓದುವ ಹವ್ಯಾಸ ಹೆಚ್ಚಾಗಬೇಕು. ಶಾಲೆಗಳಲ್ಲಿ ಮತ್ತಷ್ಟು ಉತ್ಕೃಷ್ಟ ಗುಣಮಟ್ಟದ ಶಿಕ್ಷಣ ದೊರೆತರೆ ಪ್ರತಿಯೊಬ್ಬರೂ ಅತ್ಯುನ್ನತ ಹುದ್ದೆಗೆ ಹೋಗಲು ಸಾಧ್ಯವಾಗುತ್ತದೆ. ಪೋಷಕರು ಈ ನಿಟ್ಟಿನಲ್ಲಿ ಗಂಭೀರ ಚಿಂತನೆ ನಡೆಸಬೇಕು ಎಂದು ಜಿ. ಬಿ. ವಿನಯ್ ಕುಮಾರ್ ಅವರು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಜಿ.ಬಿ.ವಿನಯ್ ಕುಮಾರ್ ಅವರನ್ನು ಆತ್ಮೀಯವಾಗಿ ಸನ್ಮಾನಿಸಲಾಯಿತು. ಸಾಣೆಹಳ್ಳಿ ಶ್ರೀ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮೀಜಿ ಸಾನಿಧ್ಯ ವಹಿಸಿದ್ದರು. ಹೊಸದುರ್ಗ ಕನಕಗುರುಪೀಠ ಕಾಗಿನೆಲೆ ಮಹಾಸಂಸ್ಥಾನ ಮಠದ ಶ್ರೀ ಈಶ್ವರಾನಂದಪುರಿ ಮಹಾಸ್ವಾಮೀಜಿ, ಡಾ. ಶ್ರೀ ಬಸವ ಮಾಚಿದೇವಮಹಾಸ್ವಾಮೀಜಿ, ಶಾಂತಭೀಷ್ಮ ಚೌಡಯ್ಯ ಸ್ವಾಮೀಜಿ, ಬೆಂಗಳೂರು ವಿ.ವಿ.ಯ ವಿಶ್ರಾಂತ ಕುಲಪತಿಗಳಾದ ಪ್ರೊ. ಕೆ. ಸಿದ್ದಪ್ಪ, ವಿಂಶ್ರಾಂತ ಪ್ರಾಚಾರ್ಯ ಎನ್. ಲೋಕೇಶ್ ಒಡೆಯರ್, ಗ್ರಾಮದ ಹಿರಿಯ ಮುಖಂಡರಾದ ಬಸವನಗೌಡ್ರು ಸೇರಿದಂತೆ ಗಣ್ಯರು, ಗ್ರಾಮದ ಮುಖಂಡರು ಹಾಜರಿದ್ದರು.

### ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿಕೆ

# ದರ್ಶನ ಶಾಸ್ತ್ರಕ್ಕೆ ಶಂಕರಾಚಾರ್ಯರ ಕೊಡುಗೆ ಅಪಾರ

» ಚಿತ್ರದುರ್ಗ



ಭಾರತೀಯ ತತ್ವಶಾಸ್ತ್ರ ಹಾಗೂ ದರ್ಶನ ಶಾಸ್ತ್ರಕ್ಕೆ ಆದಿಗುರು ಶಂಕರಾಚಾರ್ಯರ ಕೊಡುಗೆ ಅಪಾರವಾಗಿದೆ ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ಸಹಯೋಗದಲ್ಲಿ ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ಆಯೋಜಿಸಲಾದ ಆದಿಗುರು ಶಂಕರಾಚಾರ್ಯರ ಜಯಂತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ, ಶಂಕರಾಚಾರ್ಯರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಅವರು ಮಾತನಾಡಿದರು.

ಕೇವಲ 32 ವರ್ಷಗಳ ಕಾಲ ಬದುಕಿದ್ದ ಶಂಕರಾಚಾರ್ಯರು ಅಲ್ಪಕಾಲದಲ್ಲಿಯೇ ಬೃಹತ್ ಸಾಧನೆ ಮಾಡಿದರು. ಇವರ ಅದ್ವೈತ ಸಿದ್ಧಾಂತ ಆತ್ಮ ಹಾಗೂ ಪರಮಾತ್ಮ ಎರಡು ಒಂದೇ ಎಂದು ಸಾರಿತು. ನಮ್ಮನ್ನು ನಾವು ಅರಿತರೆ, ಬೇರೆಯವರನ್ನು ಅರ್ಥೈಸಿಕೊಳ್ಳಬಹುದು. ಬಾಲ್ಯದಲ್ಲಿಯೇ ಶಂಕರಚಾರ್ಯರು ಅದ್ಭುತ ಜ್ಞಾನ ಸಂಪಾದಿಸಿದ್ದರು. ಏಳನೇ ಶತಮಾನದಲ್ಲಿಯೆ ಅಖಂಡ ಭಾರತದಲ್ಲಿ ಸಂಚರಿಸಿ, ನಾಲ್ಕು ಕಡೆಗಳಲ್ಲಿ ಪೀಠಗಳನ್ನು ಸ್ಥಾಪಿಸಿದರು. ಶೃಂಗೇರಿಯಲ್ಲಿ ಶಂಕರಾಚಾರ್ಯರು ಸ್ಥಾಪಿಸಿದ ಪೀಠ ಇಂದಿಗೂ ಜ್ಞಾನ ಮಹಿಮೆಯನ್ನು ಸಾರುತ್ತಿದೆ. ನಾವೆಲ್ಲರು ಧರ್ಮ ಜಾತಿ ಸಂಕೋಲೆಗಳನ್ನು ಮೀರಿ, ಅಲ್ಪ ಮಾನವರಿಂದ ವಿಶ್ವಮಾನರಾಗಬೇಕು ಎಂದು ಬಿ.ಟಿ.ಕುಮಾರಸ್ವಾಮಿ ಹೇಳಿದರು.

ಅಯ್ಯಪ್ಪ ಸ್ವಾಮಿ ದೇವಸ್ಥಾನದ ಪ್ರಧಾನ ಅರ್ಚಕರು ಹಾಗೂ ಜಿಲ್ಲಾ ಬ್ರಾಹ್ಮಣ ಸಂಘ ನಿರ್ದೇಶಕ ಸತೀಶ್.ಎಸ್ ಉಪನ್ಯಾಸ ನೀಡಿ, ಶಂಕರಾಚಾರ್ಯರ ಜನ್ಮದಿನವನ್ನು ಭಾರತದಲ್ಲಿ ತತ್ವಜ್ಞಾನಿಗಳ ದಿನ ಎಂದು ಆಚರಿಸಲಾಗುತಿದೆ. ರಾಜ್ಯಸರ್ಕಾರದವತಿಯಿಂದ ಶಂಕರಾಚಾರ್ಯರ ಜಯಂತಿ ಆಚರಿಸುತ್ತಿರುವುದು ಸಂತಸದ ವಿಷಯವಾಗಿದೆ. ಅದ್ವೈತ ಸಿದ್ಧಾಂತವನ್ನು ಅರ್ಥೈಸಿಕೊಳ್ಳುವುದು ಕಷ್ಟದ ವಿಷಯವಾಗಿದೆ. ಸ್ವಾಮಿ ವಿವೇಕಾನಂದರು, ಶಂಕರಾಚಾರ್ಯರು ಬಗ್ಗೆ ತಳಸ್ಪರ್ಶಿಯಾಗಿ ಅಧ್ಯಯನ ಮಾಡದ ಹೊರತು ಭಾರತದ ಇತಿಹಾಸವನ್ನು ಅರಿಯಲು ಸಾಧ್ಯವಿಲ್ಲ ಎಂದು ಹೇಳಿದ್ದಾರೆ. ಹಿಂದೂ ಸನಾತನ ಧರ್ಮ ರಕ್ಷಣೆಗೆ ಶಂಕರಾಚಾರ್ಯರು ಕೊಡುಗೆ ಅಪಾರವಾಗಿದೆ. ಒಂದು ಇಡೀ ವಿಶ್ವವಿದ್ಯಾಲಯ ಮಾಡಬಹುದಾದ ಕಾರ್ಯವನ್ನು ಶಂಕರಾಚಾರ್ಯರು ಒಬ್ಬರೇ ಮಾಡಿದ್ದಾರೆ. ಅವರು ಬರೆದ ಭಾಷ್ಯಗಳು, ಗ್ರಂಥಗಳನ್ನು ಸಂಪೂರ್ಣವಾಗಿ ಅಧ್ಯಯನ ಮಾಡಿದರೆ ಮಾತ್ರ ಶಂಕರ ತತ್ವಗಳನ್ನು ಅರಿಯಬಹುದು ಎಂದರು.

ಜಿಲ್ಲಾ ಬ್ರಾಹ್ಮಣರ ಸಂಘದ ಅಧ್ಯಕ್ಷ ಜಿ.ಎಸ್. ಮಂಜುನಾಥ್, ಕಾರ್ಯದರ್ಶಿ ಪ್ರಾಣೇಶ್ ರಾವ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ರೇಣುಪ್ರಸಾಧ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಬಿ.ಎಂ.ಗುರುನಾಥ್ ಸೇರಿದಂತೆ ಬ್ರಾಹ್ಮಣ ಸಮುದಾಯದ ಮುಖಂಡರು ಉಪಸ್ಥಿತರಿದ್ದರು. ನವೀನ್ ಮಸ್ಕಲ್ ನಿರೂಪಿಸಿದರು. ಕಲಾವಿದೆ ಮೀನಾಕ್ಷಿ ತಂಡದವರು ಶಂಕರಾಚಾರ್ಯ ರಚಿಸಿದ ಗೀತೆಗಳನ್ನು ಹಾಗೂ ನಾಡಗೀತೆಯನ್ನು ಪ್ರಸ್ತುತಪಡಿಸಿದರು.

### ಜಗದ್ಗುರು ಶಂಕರಚಾರ್ಯರ ಸಾಧನೆ ಮತ್ತು ವಿಚಾರಧಾರೆ ಇಂದಿಗೂ ಜೀವಂತ: ಶಾಸಕ ಟಿ.ರಘುಮೂರ್ತಿ



» ಚಳ್ಳಕೆರೆ–

ಸನಾತನ ಹಿಂದೂಧರ್ಮದ ಪಿತಾಮಹ ಜಗದ್ಗುರು ಶಂಕರಚಾರ್ಯರು ಚಿಕ್ಕವಯಸ್ಸಿನಲ್ಲಿಯೇ ಅಸಾಧಾರಣಾ ಸಾಧನೆ ಮಾಡಿದ್ದಾರೆ. ಹಿಂದೂ ಸಮಾಜಕ್ಕೆ ಜೀವಂತಿಯನ್ನು ತುಂಬುವಲ್ಲಿ ಶಂಕರಚಾರ್ಯರ ಪಾತ್ರ ಅಪಾರವೆಂದು ಕ್ಷೇತ್ರದ ಶಾಸಕ, ಸಣ್ಣಕೈಗಾರಿಕೆ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು. ಅವರು, ಶುಕ್ರವಾರ ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಹಾಗೂ ತಾಲ್ಲೂಕು ಬ್ರಾಹ್ಮಣ ಸಂಘ ಹಮ್ಮಿಕೊಂಡಿದ್ದ ಶಂಕರಚಾರ್ಯ ಜಯಂತಿ ಕಾರ್ಯಕ್ರಮವನ್ನು ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸುವ ಮೂಲಕ ಚಾಲನೆ ನೀಡಿ ಮಾತನಾಡಿದರು. ಪ್ರಾಸ್ತಾವಿಕವಾಗಿ ಮಾತನಾಡಿದ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಅಧ್ಯಕ್ಷ, ತಹಶೀಲ್ದಾರ್ ರೇಹಾನ್‌ಪಾಷ, ಭಾರತ ವೈಶಿಷ್ಟ್ಯಮಯ ರಾಷ್ಟ್ರವಾಗಿದೆ, ಎಲ್ಲಾ ಧರ್ಮಗಳ ಸಮಾನವಾಗಿ ಬದುಕುವ ಅವಕಾಶ ಇಲ್ಲಿದೆ. ಇಂತಹ ಅವಕಾಶವನ್ನು ಮಾಡಿಕೊಟ್ಟವರು ಜಗದ್ಗುರು ಶಂಕರಚಾರ್ಯರು ಎಂದರೆ ಅತಿಶೋಕ್ತಿಯಲ್ಲವೆಂದರು.

ನಗರಸಭೆ ಅಧ್ಯಕ್ಷೆ ಆರ್.ಮಂಜುಳಾ, ಉಪಾಧ್ಯಕ್ಷೆ ಕವಿತಾ, ಸ್ಥಾಯಿ ಸಮಿತಿ ಅಧ್ಯಕ್ಷ ಟಿ.ಮಲ್ಲಿಕಾರ್ಜುನ್, ಸದಸ್ಯರಾದ ರಮೇಶ್‌ಗೌಡ, ಎಂ.ಜೆ. ರಾಘವೇಂದ್ರ, ಸುಮಾಭರಮಣ್ಣ, ಹೊಯ್ಸಳಗೋವಿಂದ, ತಾಲ್ಲೂಕು ಬ್ರಾಹ್ಮಣ ಸಂಘದ ಅಧ್ಯಕ್ಷ ಡಾ.ಅನಂತರಾಮ್‌ಗೌತಮ್, ಪ್ರಧಾನ ಕಾರ್ಯದರ್ಶಿ ಎಂ.ಸತ್ಯನಾರಾಯಣರಾವ್, ಖಜಾಂಚಿ ಜಿ.ಕೃಷ್ಣಮೂರ್ತಿ, ನಿರ್ದೇಶಕರಾದ ಸಿ.ಎಸ್.ಗೋಪಿನಾಥ, ಜೆ.ಎಸ್.ಶ್ರೀನಾಥಶರ್ಮ, ಎಸ್.ವೈ.ಮುರುಳಿಕೃಷ್ಣ, ಟಿ.ಎನ್.ಬಾಬು, ಸುಬ್ರಮಣ್ಯ, ಕಾಂಗ್ರೆಸ್ ಮುಖಂಡ ಎಸ್.ಎಚ್.ಸೈಯದ್, ಶಿರಸ್ತೇದಾರ್ ಸದಾಶಿವಪ್ಪ, ಪ್ರಕಾಶ್, ಡಿ.ಶ್ರೀನಿವಾಸ್ ಮುಂತಾದವರು ಉಪಸ್ಥಿತರಿದ್ದರು.

### ನಗರಸಭೆ ನೂತನ ಉಪಾಧ್ಯಕ್ಷೆಯಾಗಿ ಕವಿತಾ ಅವಿರೋಧ ಆಯ್ಕೆ

ಮೊದಲ ಪುಟದಿಂದ: ನಗರದ ಶಾಸಕರ ಭವನದಲ್ಲಿ ಶಾಸಕ ರಘುಮೂರ್ತಿ ಭೇಟಿ ಮಾಡಿದ ನೂತನ ಉಪಾಧ್ಯಕ್ಷೆ ಕವಿತಾಬೋರಯ್ಯ ಆಯ್ಕೆಯಾಗಲು ಸಹಕಾರ ನೀಡಿದ್ದಕ್ಕೆ ಜಿಲ್ಲಾ ಹಾಗೂ ಕ್ಷೇತ್ರ ಮಟ್ಟದ ಎಲ್ಲಾ ಮುಖಂಡರಿಗೆ ಕೃತಜ್ಞತೆ ಸಲ್ಲಿಸಿದರು. ಶಾಸಕ ಟಿ.ರಘುಮೂರ್ತಿಯವರು ನನ್ನ ಮೇಲೆ ವಿಶ್ವಾಸವಿಟ್ಟು ಉಪಾಧ್ಯಕ್ಷ ಸ್ಥಾನ ನೀಡಿದ್ದು ಶಾಸಕರು ಹಾಗೂ ಪಕ್ಷದ ಗೌರವ ಘನತೆ ಎತ್ತಿಹಿಡಿಯುವ ಕಾರ್ಯ ಮಾಡುವುದಾಗಿ ತಿಳಿಸಿದರು.



## ಪ್ರಮುಖ ಸುದ್ದಿ

# ಬಾಲನ್ಯಾಯ ಮಂಡಳಿ ನೂತನ ಕಚೇರಿ ಉದ್ಘಾಟನೆ

» ಚಿತ್ರದುರ್ಗ



ಜಿಲ್ಲಾ ಪಂಚಾಯಿತಿ ಆವರಣದಲ್ಲಿನ ಜಿಲ್ಲಾ ಬಾಲನ್ಯಾಯ ಮಂಡಳಿ ನೂತನ ಕಚೇರಿಯನ್ನು ಜಿ.ಪಂ.ಸಿಇಓ ಎಸ್. ಜೆ.ಸೋಮಶೇಖರ್ ಶುಕ್ರವಾರ ಉದ್ಘಾಟಿಸಿದರು.

ಈ ಹಿಂದೆ ಸ್ಟೇಡಿಯಂ ಹತ್ತಿರದ ಬಾಲಭವನದ ಕಟ್ಟಡಲ್ಲಿ ಜಿಲ್ಲಾ ಬಾಲನ್ಯಾಯ ಮಂಡಳಿ ಕಾರ್ಯನಿರ್ವಹಿಸುತ್ತಿತ್ತು. ಬಾಲ ಮಂಡಳಿ ಕಾರ್ಯ ಕಲಾಪಗಳಿಗೆ ಸೂಕ್ತ ಸ್ಥಳಾವಕಾಶದ ಕೊರತೆ ಎದುರಾಗಿತ್ತು. ಇದನ್ನು ಮನಗಂಡು, ಆಯುಷ್ ಇಲಾಖೆ ತೆರವಿನಿಂದ ಜಿಲ್ಲಾ ಪಂಚಾಯತಿ ಆವರಣಲದಲ್ಲಿ ಖಾಲಿ ಇದ್ದ ಕಟ್ಟಡವನ್ನು ಬಾಲ ನ್ಯಾಯಮಂಡಳಿಗೆ ನೀಡುವಂತೆ ಕೋರಲಾಗಿತ್ತು. ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅಧ್ಯಕ್ಷತೆಯಲ್ಲಿ ಜರುಗಿದ ಸಭೆಯಲ್ಲಿ ತೀರ್ಮಾನಿಸಿ, ಬಾಲನ್ಯಾಯ ಮಂಡಳಿಗೆ ಕಟ್ಟಡನ್ನು ಒದಗಿಸಲಾಗಿದೆ. ನೂತನ ಕಟ್ಟಡದಲ್ಲಿ ಕಾರ್ಯಕಲಾಪ ನಡೆಸಲು ಪ್ರತ್ಯೇಕ ಸಭಾಂಗಣ, ನ್ಯಾಯ ಮಂಡಳಿ ಅಧ್ಯಕ್ಷರ, ಸದಸ್ಯರ ಕೊಠಡಿಗಳು, ಆಪ್ತ ಸಮಾಲೋಚನಾ, ದಾಖಲೆಗಳ ಸಂಗ್ರಹದ ಕೊಠಡಿಗಳು ಪ್ರತ್ಯೇಕವಾಗಿವೆ. ನೂತನ ಕಚೇರಿ ಕಟ್ಟಡವು ಕಾರ್ಯಕಲಾಪ ನಡೆಸಲು ಸೂಕ್ತವಾಗಿದೆ. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಕಚೇರಿ ಬೇಕಾದ ನೂತನ ಪೀಠೋಪಕರಣಗಳನ್ನು ಒದಗಿಸಲಾಗಿದೆ ಎಂದು ಜಿಲ್ಲಾ ಬಾಲ ನ್ಯಾಯ ಮಂಡಳಿ ಅಧ್ಯಕ್ಷೆ ಹಾಗೂ ಸಿವಿಲ್ ನ್ಯಾಯಾಧೀಶೆ ಉಜ್ವಲ ವೀರಣ್ಣವರ್ ಈ ಸಂದರ್ಭದಲ್ಲಿ ತಿಳಿಸಿದರು.

ಪ್ರಧಾನ ಜಿಲ್ಲಾ ಸತ್ರನ್ಯಾಯಾಧೀಶ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷ ರೋಣ್ ವಾಸುದೇವ್ ನೂತನ ಕಚೇರಿ ಪ್ರವೇಶದ ಪೂಜಾ ಕಾರ್ಯ ನೆರವೇರಿಸಿದರು. ಕಾರ್ಯಕ್ರಮದಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶ ಹಾಗೂ ಕಾನೂನು ಸೇವಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಂ.ವಿಜಯ್, ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶೆ ಹಾಗೂ ಸಿಜೆಎಂ ಮಮತಾ.ಡಿ, ಹೆಚ್ಚುವರಿ ಪೋಲೀಸ್ ವರಿಷ್ಠಾಧಿಕಾರಿ ಎಸ್.ಜೆ.ಕುಮಾರಸ್ವಾಮಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಬಣಕಾರ್, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಸವಿತಾ, ವಕೀಲರ ಸಂಘದ ಅಧ್ಯಕ್ಷ ತಿಪ್ಪೇಸ್ವಾಮಿ ಸೇರಿದಂತೆ ಸದಸ್ಯರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಯುವನಿಧಿ ಸ್ವಯಂ ಘೋಷಣೆ ಸಲ್ಲಿಸಲು ಅವಕಾಶ

» ದಾವಣಗೆರೆ

ಯುವನಿಧಿ ಯೋಜನೆಯ ಫಲಾನುಭವಿಗಳು ಪ್ರಸ್ತುತ ಮಾಸಿಕವಾಗಿ ದಾಖಲಿಸುತ್ತಿರುವ ಸ್ವಯಂ ಘೋಷಣೆಯ ಬದಲಾಗಿ, ಇನ್ನು ಮುಂದೆ (ಮಾರ್ಚ್, ಏಪ್ರಿಲ್ ಮತ್ತು ಮೇ–2025ರವರೆಗಿನ) ತ್ರೈಮಾಸಿಕ ಸ್ವಯಂ ಘೋಷಣೆಯನ್ನು ಮೇ.01 ರಿಂದ ಮೇ.25 ರೊಳಗಾಗಿ ಸಲ್ಲಿಸಲು ಅವಕಾಶ ಕಲ್ಪಸಲಾಗಿದೆ. ಸರ್ಕಾರದ ಮಹತ್ವಾಕಾಂಕ್ಷಿ ಗ್ಯಾರಂಟಿ ಯೋಜನೆಯಾದ ಯುವನಿಧಿ ಯೋಜನೆಯಡಿಯಲ್ಲಿ 2023 ಹಾಗೂ 2024ನೇ ಸಾಲಿನಲ್ಲಿ ತೇರ್ಗಡೆಯಾದ ಪದವಿ, ಸ್ನಾತಕೋತ್ತರ ಹಾಗೂ ಡಿಪ್ಲೊಮೋ ಅರ್ಹತೆ ಹೊಂದಿದವರು ಯುವನಿಧಿ ಯೋಜನೆಯ ನಿರುದ್ಯೋಗಿ ಭತ್ಯೆ ಪಡೆಯಲು ಸೇವಾ ಸಿಂಧು ಪೋರ್ಟಲ್ ಅಥವಾ ದಾವಣಗೆರೆ ಒನ್, ಗ್ರಾಮ ಒನ್, ಕರ್ನಾಟಕ ಒನ್, ಬಾಪೂಜಿ ಸೇವಾ ಕೇಂದ್ರಗಳಲ್ಲಿ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸಲು ಅಂತಿಮ ದಿನಾಂಕ ನಿಗದಿಯಾಗಿರುವುದಿಲ್ಲ. ಅರ್ಹ ನಿರುದ್ಯೋಗಿ ಅಭ್ಯರ್ಥಿಗಳು ಹೆಚ್ಚಿನ ಮಾಹಿತಿಗಾಗಿ ಜಿಲ್ಲಾಡಳಿತ ಭವನದಲ್ಲಿನ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ಕಚೇರಿಯನ್ನು ಸಂಪರ್ಕಿಸಬಹುದು ಎಂದು ಉದ್ಯೋಗಾಧಿಕಾರಿ ಡಿ. ರವೀಂದ್ರ ತಿಳಿಸಿದ್ದಾರೆ.

### ಮೇ.4ರಂದು ನೀಟ್ ಪರೀಕ್ಷೆ: ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ



» ದಾವಣಗೆರೆ

ಮೇ.4ರಂದು ಜಿಲ್ಲೆಯ 17 ಕೇಂದ್ರಗಳಲ್ಲಿ ನೀಟ್ ಪರೀಕ್ಷೆ ನಡೆಯಲಿದ್ದು, ಯಾವುದೇ ಆಕ್ಷೇಪಣೆಗಳಿಗೆ ಅವಕಾಶ ನೀಡದಂತೆ ಅಧಿಕಾರಿಗಳು ಪರೀಕ್ಷಾ ಕರ್‍ಯವನ್ನು ಅಚ್ಚುಕಟ್ಟಾಗಿ ನರ್‍ವಹಿಸಬೇಕು ಎಂದು ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ ಸೂಚಿಸಿದರು. ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನೀಟ್ ಪರೀಕ್ಷೆ ಪರ್‍ವ ಸಿದ್ದತೆ ಕುರಿತು ಶುಕ್ರವಾರ ನಡೆದ ಪರ್‍ವಸಿದ್ಧತಾ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಜಿಲ್ಲೆಯಲ್ಲಿ ಸುಗಮವಾಗಿ ಪರೀಕ್ಷೆ ನಡೆಸುವ ದೃಷ್ಟಿಯಿಂದ ಅಗತ್ಯ ಸಿದ್ದತೆ ಕೈಗೊಳ್ಳಲು ಸೂಚನೆ ನೀಡಲಾಗಿದೆ. ಅಧಿಕಾರಿಗಳು ಸಮನ್ವಯತೆಯಿಂದ ಕೆಲಸ ಮಾಡಬೇಕು. ಪರೀಕ್ಷೆ ನಡೆಯುವ ಸಂರ್ಭದಲ್ಲಿ ಏನಾದರೂ ತೊಡಕುಗಳುಂಟಾದಲ್ಲಿ, ಇನ್ನಿತರೆ ಲೋಪದೋಷಗಳು ಕಂಡುಬಂದಲ್ಲಿ ಮೇಲಾಧಿಕಾರಿಗಳಿಗೆ ತಿಳಿಸಬೇಕು. ನೋಡಲ್ ಅಧಿಕಾರಿಗಳು ಪರೀಕ್ಷಾ ಮರ್‍ಗಸೂಚಿಗಳನ್ನು ಎಚ್ಚರಿಕೆಯಿಂದ ಕಟ್ಟುನಿಟ್ಟಾಗಿ ಪಾಲಿಸಬೇಕು. ಎಲ್ಲಾ ಪರೀಕ್ಷಾ ಕೇಂದ್ರಗಳಿಗೆ ಅಗತ್ಯ ಮೂಲಭೂತ ಸೌರ್‍ಯಗಳನ್ನು ಒದಗಿಸುವುದರ ಜೊತೆಗೆ ಪರೀಕ್ಷಾ ಕೇಂದ್ರಕ್ಕೆ ಪೊಲೀಸ್ ಸಿಬ್ಬಂದಿ ಮತ್ತು ಆರೋಗ್ಯ ಇಲಾಖೆಸಿಬ್ಬಂದಿನಿಯೋಜಿಸುವಂತೆಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.ರಾಷ್ಟ್ರೀಯ ಪರೀಕ್ಷಾ ಸಂಸ್ಥೆ ಜಿಲ್ಲಾ ಸಂಯೋಜಕಿ ಹಾಗೂ ಕೇಂದ್ರಿಯ ವಿದ್ಯಾಲಯ ಪ್ರಾಂಶುಪಾಲರಾದ ರೇಖಾ ಜೋಷಿ ಮಾತನಾಡಿ, ದಾವಣಗೆರೆ ನಗರದಲ್ಲಿ 15 ಪರೀಕ್ಷಾ ಕೇಂದ್ರ ಹಾಗೂ ಹರಿಹರ ನಗರದಲ್ಲಿ 2 ಪರೀಕ್ಷಾ ಕೇಂದ್ರಗಳು ಸೇರಿ ಜಿಲ್ಲೆಯಲ್ಲಿ ಒಟ್ಟು 17 ಪರೀಕ್ಷಾ ಕೇಂದ್ರಗಳಲ್ಲಿ ಒಟ್ಟಾರೆ 7,999 ವಿದ್ಯರ್ಥಿಗಳು ನೀಟ್ ಪರೀಕ್ಷೆ ಬರೆಯಲಿದ್ದಾರೆ. ಕೊಠಡಿಗಳಲ್ಲಿ ಸಿಸಿಟಿವಿ ಮತ್ತು ವಿದ್ಯರ್ಥಿಗಳ ಚಲನವಲನ, ಮತ್ತು ಸಿಸಿಟಿವಿ ಡಿವಿಆರ್ ಮತ್ತು ರೆಕರ್ಡಿಂಗ್ ಆಗುತ್ತಿರುವ ಬಗ್ಗೆ ಖುದ್ದು ಪರಿಶೀಲನೆ ನಡೆಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.ಈ ಸಂರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಪಿ.ಎನ್.ಲೋಕೇಶ್, ಪದವಿ ಪರ್‍ವ ಶಿಕ್ಷಣ ಇಲಾಖೆ ಉಪನರ್ದೇಶಕ ಕರಿಸಿದ್ದಪ್ಪ, ಎಲ್ಲಾ ಪರೀಕ್ಷಾ ಕೇಂದ್ರದ ಪ್ರಾಂಶುಪಾಲರು, ನೋಡಲ್ ಅಧಿಕಾರಿಗಳು ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

### ಮತ್ಸ್ಯ ಸಂಪದ ಯೋಜನೆ ಅರ್ಜಿ ಆಹ್ವಾನ

» ಚಿತ್ರದುರ್ಗ

ಪ್ರಧಾನ ಮಂತ್ರಿ ಮತ್ಸ್ಯ ಸಂಪದ ಯೋಜನೆ ಮೂಲಕ 2024–25 ನೇ ಸಾಲಿನ ಕಾರ್ಯಕ್ರಮದಡಿ ಚಿತ್ರದುರ್ಗ ಜಿಲ್ಲೆಯ ಅರ್ಹ ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಯೋಜನೆಯಡಿ ಸಾಮಾನ್ಯ ವರ್ಗದವರಿಗೆ ಘಟಕ ವೆಚ್ಚದ ಶೇ.40 ರಷ್ಟು ಹಾಗೂ ಮಹಿಳೆಯರು, ಪರಿಶಿಷ್ಟ ಜಾತಿ ಮತ್ತು ಪಂಗಡದವರಿಗೆ ಶೇ.60 ರಷ್ಟು ಸಹಾಯ ಧನ ನೀಡಲಾಗುವುದು. ಜಿಲ್ಲೆಗೆ ಒಂದು ಮಧ್ಯಮ ಗಾತ್ರದ ಅಲಂಕಾರಿಕ ಮೀನುಗಳ ಪಾಲನೆ ಘಟಕದ ಗುರಿ ನಿಗದಿ ಮಾಡಲಾಗಿದ್ದು, ಮಹಿಳೆಯರು ಅರ್ಜಿ ಸಲ್ಲಿಸಬಹುದು. ಆಸಕ್ತರು ಮೇ 20 ರೊಳಗೆ ಅರ್ಜಿಗಳನ್ನು ಸಂಬಧಿಸಿದ ತಾಲೂಕಿನ ಮೀನುಗಾರಿಕೆ ಸಹಾಯಕ ನಿರ್ದೇಶಕರ ಕಛೇರಿಗೆ ಅಗತ್ಯ ದಾಖಲಾತಿಗಳ ಸಹಿತ ಸಲ್ಲಿಸುವಂತೆ ಮೀನುಗಾರಿಕೆ ಉಪನಿರ್ದೇಶಕರು ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಜೋಗಿಮಟ್ಟಿ ರಸ್ತೆಯ ಪ್ರಶಾಂತ ನಗರದ, ಡಾ.ರವಿಚಂದ್ರನ್ ಕಟ್ಟದಲ್ಲಿನ ಮೀನುಗಾರಿಕೆ ಉಪನಿರ್ದೇಶಕರ ಕಛೇರಿ ಭೇಟಿ ನೀಡಬಹುದು. ದೂರವಾಣಿ ಸಂಖ್ಯೆ 08194–234004 ಕರೆ ಮಾಡಬಹುದು.

# ಹಿಂದೂ ಕಾರ್ಯಕರ್ತನ ಹತ್ಯೆ: ಪ್ರತಿಭಟನೆ

» ಚಿತ್ರದುರ್ಗ

ಹಿಂದೂ ಸಂಘಟನೆಯ ಕಾರ್ಯಕರ್ತ ಸುಹಾಸ್ ಶೆಟ್ಟಿಯವರ ಹತ್ಯೆಯನ್ನು ಖಂಡಿಸಿ ಶುಕ್ರವಾರ ಚಿತ್ರದುರ್ಗ ನಗರದಲ್ಲಿ ಭಾರತೀಯ ಜನತಾ ಪಾರ್ಟಿಯವತಿಯಿಂದ ಒನಕೆ ಓಬವ್ವ ವೃತ್ತದಲ್ಲಿ ಪ್ರತಿಭಟನೆಯನ್ನು ನಡೆಸಿ ಸರ್ಕಾರದ ವಿರುದ್ದ ಘೋಷಣೆಯನ್ನು ಕೂಗಿ ಹತ್ಯೆಯನ್ನು ಮಾಡಿದವರನ್ನು ಬಂಧಿಸಿ ಶಿಕ್ಷೆಗೆ ಗುರಿಪಡಿಸುವಂತೆ ಆಗ್ರಹಿಸಲಾಯಿತು.




ಈ ಸಂದರ್ಭದಲ್ಲಿ ಮಾತನಾಡಿದ ರಾಜ್ಯ ರೈತ ಮೋರ್ಚಾದ ಪ್ರಧಾನ ಕಾರ್ಯದರ್ಶಿ ಮಲ್ಲಿಕಾರ್ಜನ್ ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಾಗಿನಿಂದಲೂ ಹಿಂದೂಗಳ ಮೇಲೆ ನಿರಂತರವಾಗಿ ಹಲ್ಲೆ ನಡೆಯುತ್ತಿದೆ, ಇದಕ್ಕೆ ರಾಜ್ಯ ಸರ್ಕಾರ ಕುಮ್ಮಕ್ಕು ನೀಡುತ್ತಾ ಅರೋಪಿಗಳನ್ನು ಬಂಧಿಸುವಲ್ಲಿ ವಿಫಲವಾಗಿದ್ದು ಅವರಿಗೆ ರಕ್ಷಣೆಯನ್ನು ನೀಡುತ್ತಿದೆ. ರಾಜ್ಯದಲ್ಲಿನ ಸರ್ಕಾರ ಹಿಂದೂಗಳ ವಿರೋಧಿ ಸರ್ಕಾರವಾಗಿದೆ. ಇಲ್ಲಿ ಹಿಂದೂಗಳು ನೆಮ್ಮದಿಯಾಗಿ ಬದುಕನ್ನು ನಡೆಸುವುದು ಇವರ ಆಡಳಿತದಲ್ಲಿ ಕಷ್ಟವಾಗಿದೆ ಎಂದು ದೂರಿದರು.

ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹಾಳಾಗಿದೆ. ಕರ್ನಾಟಕ ಎನ್ನುವುದು ಆರೋಪಿಗಳ ಸ್ವರ್ಗವಾಗಿದೆ ಇಲ್ಲಿ ಏನೇ ಮಾಡಿದರು ಸಹಾ ಯಾರೂ ಕೇಳುವವರಿಲ್ಲ ಎನ್ನುವಂತಾಗಿದೆ ರಾಜ್ಯದ ಆಡಳಿತವನ್ನು ನಡೆಸುತ್ತಿರುವ ರಾಜಕೀಯ ಪಕ್ಷದವರು ಸಹಾ ಇಂತಹ ಕೆಲಸವನ್ನು ಮಾಡುವವರಿಗೆ ಕುಮ್ಮಕ್ಕು ನೀಡುತ್ತಿದ್ದಾರೆ ಆರೋಪಿಗಳನ್ನು ಬಂಧಿಸುವಲ್ಲಿ ಪೋಲಿಸರು ಮುಂದೆ ಹೋದರು ಸಹಾ ಅವರನ್ನು ರಾಜಕೀಯ ವ್ಯಕ್ತಿಗಳು ಹಿಂದಕ್ಕೆ ಎಳೆಯುತ್ತಿದ್ದಾರೆ ಎಂದು ಆರೋಪಿಸಿದರು. ರೈತ ಮೋರ್ಚಾದ ಜಿಲ್ಲಾಧ್ಯಕ್ಷ ವೆಂಕಟೇಶ್ ಯಾದವ್ ಮಾತನಾಡಿ, ನಮ್ಮ ರಾಜ್ಯದಲ್ಲಿ ಇರುವುದರ ಗೊಂಡಾ ಸರ್ಕಾರವಾಗಿದೆ ಹಿಂದೂಗಳನ್ನು ರಕ್ಷಣೆ ಮಾಡುವಲ್ಲಿ ವಿಫಲವಾಗಿದೆ. ಸರ್ಕಾರ ಒಂದು ಜನಾಂಗವನ್ನು ಮಾತ್ರ ಓಲೈಕೆ ಮಾಡುವಲ್ಲಿ ಮುಂದಾಗಿದೆ. ಇದರಿಂದ ಆ ಕೋಮಿನ ಜನತೆ ಅರ್ಭಟ ಹೆಚ್ಚಾಗಿದೆ. ಇದನ್ನು ತಡೆಯುವವರಿಲ್ಲ ಎನ್ನುವಂತಾಗಿದೆ ಇದನ್ನು ನಿಲ್ಲಿಸುವವರೆಗೂ ಸಹಾ ನಮ್ಮ ಹೋರಾಟ ನಿಲ್ಲುವುದಿಲ್ಲ ಎಂದು ಸರ್ಕಾರಕ್ಕೆ ಎಚ್ಚರಿಕೆ ನೀಡಿದರು.

ಈ ಪ್ರತಿಭಟನೆಯಲ್ಲಿ ನಗರಾಧ್ಯಕ್ಷ ಲೋಕೇಶ್, ಗ್ರಾಮಾಂತರ ಅಧ್ಯಕ್ಷ ನಾಗರಾಜ್, ಜಿಲ್ಲಾ ವಕ್ತಾರ ನಾಗರಾಜ್ ಬೇದ್ರೇ, ದಗ್ಗೆ ಶಿವಪ್ರಕಾಶ್, ಮಾಧ್ಯಮ ವಕ್ತಾರ ಥಲವಾದಿ ತಿಪ್ಪೇಸ್ವಾಮಿ, ಯುವ ಮುಖಂಡ ಹೇರಿಸ್ವಾಮಿ, ನಗರಸಭಾ ಮಾಜಿ ಸದಸ್ಯ ನಾಗರಾಜ್ ಭಾಗವಹಿಸಿದ್ದರು.

## ಚಿತ್ರಯ್ಯನಹಟ್ಟಿ: ಬಾಸುಮತಿ ಭತ್ತಬೆಳೆದ ರೈತ ಲಕ್ಷ್ಮಣ ಪಾಳೆಗಾರ; ಹೆಚ್ಚು ಲಾಭದ ನಿರೀಕ್ಷೆಯಲ್ಲಿ ರೈತ

» ಚಳ್ಳಕೆರೆ

ನಗರದ ಚಿತ್ರಯ್ಯನಹಟ್ಟಿ ನಿವಾಸಿ ರೈತ ಲಕ್ಷ್ಮಣಪಾಳೆಗಾರ ಇದೇ ಮೊದಲಬಾರಿಗೆ ತನ್ನ ಎರಡು ಎಕರೆ ಜಮೀನಿನಲ್ಲಿ ಬಾಸುಮತಿ ಭತ್ತ ಬೆಳೆಯುವ ಮೂಲಕ ಹೊಸ ಬೆಳೆಬೆಳೆಯಲು ಮುಂದಾಗಿ ಯಶಸ್ಸು ಕಂಡಿದ್ದಾನೆ.

ಕೃಷಿ ಇಲಾಖೆ ಅಧಿಕಾರಿಗಳು ಈ ಭಾಗದಲ್ಲಿ ಬಾಸುಮತಿ ಭತ್ತ ಬೆಳೆಯುವುದು ಸವಾಲಿನ ಕೆಲಸ ಕಾರಣ ಈ ಭಾಗದಲ್ಲಿ ಸೂಕ್ತ ಮಾರುಕಟ್ಟೆ ಇಲ್ಲ, ಮಾಮೂಲಿ ಭತ್ತಕ್ಕಿಂತ ಈ ಭತ್ತದ ದರ ಹೆಚ್ಚಿರುತ್ತದೆ.

ಕೆಲವೇ ಜನರು ಮಾತ್ರ ಬಾಸುಮತಿ ಅಕ್ಕಿಯನ್ನು ಉಪಯೋಗಿಸುತ್ತಾರೆ ಆದರೂ ಈ ಭಾಗದಲ್ಲಿ ಬಾಸುಮತಿ ಭತ್ತ ಆರಂಭವಾಗಿರುವುದು ಶುಭಸಂಕೇತ ಎಂದಿದ್ದಾರೆ.

ರೈತ ಲಕ್ಷ್ಮಣಪಾಳೆಗಾರ ಪತ್ರಿಕೆಯೊಂದಿಗೆ ಮಾತನಾಡಿ, ಬಾಸುಮತಿಭತ್ತ ಈ ಭಾಗದಲ್ಲಿ ಬೆಳೆಯಲು ಸಾಧ್ಯವಿಲ್ಲವೆಂಬ ಕೆಲವರ ಅಭಿಪ್ರಾಯಕ್ಕೆ ನಾನು ಚಿಂತನೆ ನಡೆಸಿ ಬೆಳಗಾವಿಯಿಂದ 30 ಕೆ.ಜಿ.ಬಾಸುಮತಿ ಭತ್ತದ ಬೀಜ ತರಿಸಿ ಎರಡು ಎಕರೆ ಪ್ರದೇಶದಲ್ಲಿ ನಾಟಿ ಮಾಡಿದ್ದು ಸುಮಾರು 70 ಚೀಲ ಭಾಸುಮತಿ ಭತ್ತವನ್ನು ಬೆಳೆಯುವ ನಿರೀಕ್ಷೆಯಲ್ಲಿದ್ದೇನೆ.



ರೈತರು ಹೊಸ, ಹೊಸ ಬೆಳೆಗಳನ್ನು ಬೆಳೆಯಲು ಮುಂದಾಗಬೇಕಿದೆ ಎಂದರು. ಸಾಮಾನ್ಯವಾಗಿ ತಾಲ್ಲೂಕಿನಲ್ಲಿ ಶೇಂಗಾ, ಮೆಕ್ಕೆಜೋಳ, ಸೂರ್ಯಕಾಂತಿ, ರಾಗಿ, ತೊಗರಿ ಮುಂತಾದ ಬೆಳೆಗಳನ್ನು ಬೆಳೆಯಲು ಮುಂದಾಗುತ್ತಾರೆ.

ನೀರಾವರಿ ಸೌಲಭ್ಯವಿದ್ದರೂ ಸಹ ಬಾಸುಮತಿ ಭತ್ತ ಬೆಳೆಯಲು ಹಿಂದೇಟು ಹಾಕುತ್ತಾರೆ.

ಆದರೆ, ನಾನು ಯಾವುದಕ್ಕೂ ಹೆಚ್ಚು ಗಮನ ಕೊಡದೆ ಬಾಸುಮತಿ ಬೆಳೆಯಬೇಕೆಂಬ ಕಠಿಣ ನಿರ್ಧಾರದಿಂದ ನಾಟಿ ಮಾಡಿದ್ದು ಉತ್ತಮ ಫಲ ನೀಡಿದೆ ಎಂದರು.

## ಶಂಕರಾಚಾರ್ಯರ ಜಯಂತಿ ಆಚರಣೆ



» ದಾವಣಗೆರೆ

ಧರ್ಮರಕ್ಷಣೆಯ ಕುರಿತಂತೆ ಜಗತ್ತಿಗೆ ಸಾರಿ ಹೇಳಿದ ಆಚಾರ್ಯತ್ರಯರಲ್ಲಿ ಶಂಕರಾಚಾರ್ಯರು ಮೊದಲಿಗರು, ಅವರ ಆದರ್ಶ ಗುಣಗಳನ್ನು ಪ್ರತಿಯೊಬ್ಬರು ಜೀವನದಲ್ಲಿ ಅಳವಡಿಸಿಕೊಂಡು ಸನ್ಮಾರ್ಗದಲ್ಲಿ ಸಾಗಬೇಕು ಎಂದು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಜಿ.ಎಂ. ತಿಳಿಸಿದರು.ಅವರು ಶುಕ್ರವಾರ ಜಿಲ್ಲಾಧಿಕಾರಿಗಳ ಕಚೇರಿಯ ತುಂಗಾಭದ್ರ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಜಿಲ್ಲಾ ಬ್ರಾಹ್ಮಣ ಸಮಾಜ ಇವರ ಸಹಯೋಗದಲ್ಲಿ ಆಯೋಜಿಸಲಾಗಿದ್ದ ಶ್ರೀ ಶಂಕರಾಚಾರ್ಯರ ಜಯಂತಿ ಕಾರ್ಯಕ್ರಮದಲ್ಲಿ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ನಂತರ ಮಾತನಾಡಿದ ಅವರು ಧರ್ಮ ಅವನತಿಯಲ್ಲಿ ಸಾಗುತ್ತಿರುವಾಗ ಜ್ಞಾನದ ಮೂಲಕ ಧರ್ಮ ರಕ್ಷಣೆಗೆ ನಿಂತವರು ಶ್ರೀ ಶಂಕರಾಚಾರ್ಯರು, ಇಂದು ಅವರ ಜಯಂತಿ ಆಚರಿಸುತ್ತಿರುವುದು ಅರ್ಥಪೂರ್ಣವಾಗಿದೆ. ಮಹಾನ್ ನಾಯಕರುಗಳ ಆದರ್ಶ ಗುಣಗಳನ್ನು ಪ್ರತಿಯೊಬ್ಬರು ಜೀವನದಲ್ಲಿ ಅಳವಡಿಸಿಕೊಂಡು ಸನ್ಮಾರ್ಗದಲ್ಲಿ ನಡೆಯುವಂತೆ ಅವರು ತಿಳಿಸಿದರು.ಸಮಾಜದ ಮುಖಂಡರಾದ ಅಧ್ಯಕ್ಷ ಅಚ್ಚುತ್ ಕುಮಾರ್ ಮಾತನಾಡಿ, ಆದಿ ಶಂಕರಾಚಾರ್ಯರ ದಿನಾಚರಣೆಯನ್ನು ಜಿಲ್ಲಾಡಳಿತದಿಂದ ಆಚರಿಸುತ್ತಿರುವುದರಿಂದ ಸಮಾಜದ ಪರವಾಗಿ ಕೃತಜ್ಞತೆ ಸಲ್ಲಿಸಿದರು. ಶಂಕರಾಚಾರ್ಯರ ವಿಚಾರಧಾರೆಗಳನ್ನು ಎಲ್ಲರೂ ತಿಳಿಯಬೇಕು. ಸಮಾಜದ ಎಂ.ಎಸ್ ವಿನಾಯಕ್ ಉಪನ್ಯಾಸ ನೀಡಿ, ಶಂಕರಾಚಾರ್ಯರನ್ನು ಇಡೀ ವಿಶ್ವವೇ ಆರಾಧಿಸುತ್ತಿದೆ. ಮನುಷ್ಯರ ಜೀವನದಲ್ಲಿ ಗುರು ಮುಖ್ಯ, ಗುರು ಇಲ್ಲದೆ ಏನು ನಡೆಯಲಾಗದು. ನಾವೆಲ್ಲರೂ ಭಗವಂತನ ಸ್ಮರಣೆ ಮಾಡಬೇಕು, ಶಂಕರಾಚಾರ್ಯರನ್ನು ಯಾವುದೇ ಒಂದು ಸಮುದಾಯಕ್ಕೆ ಸೀಮಿತಗೊಳಿಸದೆ ಅವರು ನೀಡಿದ ಕೊಡುಗೆಗಳನ್ನು ಸ್ಮರಿಸಿ, ಎಲ್ಲರೂ ಸಹ ಅವರ ಚಿಂತನೆಗಳನ್ನು ಪರಿಪಾಲಿಸಬೇಕು ಎಂದರು. ನಳಿನ ಅಚ್ಯುತಾ ಹಾಗೂ ಸಂಗಡಿಗರು ಗೀತಗಾಯನ ಮಾಡಿದರು. ಅಪರ ಜಿಲ್ಲಾಧಿಕಾರಿ ಪಿ.ಎನ್ ಲೋಕೇಶ್, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಮಮತಾ ಹೊಸಗೌಡ್ರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ರವಿಚಂದ್ರ, ಬ್ರಾಹ್ಮಣ ಸಮಾಜದ ಮುಖಂಡ ಶಶಿಕಾಂತ್, ಹಾಗೂ ಮಹಿಳೆಯರು ಸೇರಿದಂತೆ ಹಲವಾರು ಜನರು ಉಪಸ್ಥಿತರಿದ್ದರು.

## ರಾಹುಲ್ ಗಾಂಧಿ ಒತ್ತಾಯಕ್ಕೆ ಮಣಿದ ಕೇಂದ್ರ

» ಬೆಂಗಳೂರು

ವಿರೋಧ ಪಕ್ಷದ ನಾಯಕರಾದ ರಾಹುಲ್ ಗಾಂಧಿ ಅವರು ಜಾತಿ ಗಣತಿ ನಡೆಸುವುದು ಕೇಂದ್ರದ ಜವಾಬ್ದಾರಿ ಎಂದು ಹೇಳುತ್ತಿದ್ದರು. ರಾಹುಲ್ ಗಾಂಧಿಯವರ ಒತ್ತಾಯಕ್ಕೆ ಮಣಿದು ಕೇಂದ್ರ ಸರ್ಕಾರ ಜಾತಿಗಣತಿಗೆ ಮುಂದಾಗಿದೆ" ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಹೇಳಿದರು.

ಸದಾಶಿವನಗರದ ನಿವಾಸದ ಬಳಿ ಮಾಧ್ಯಮಗಳಿಗೆ ಗುರುವಾರ ಪ್ರತಿಕ್ರಿಯೆ ನೀಡಿದರು. ಕೇಂದ್ರ ಸರ್ಕಾರ ಜಾತಿಗಣತಿ ನಡೆಸಲು ನಿರ್ಧರಿಸಿರುವ ಬಗ್ಗೆ ಕೇಳಿದಾಗ, ಜಾತಿಗಣತಿಗೆ ಇಂತಿಷ್ಟು ಸಮಯ ಎಂದು ನಿಗದಿ ಮಾಡಿ ಪೂರ್ಣಗೊಳಿಸಬೇಕು ಎಂದು ರಾಹುಲ್ ಗಾಂಧಿ ಅವರು ಹೇಳಿದ್ದು. ಇದರಂತೆ ಕೇಂದ್ರ ಸರ್ಕಾರ ನಡೆದುಕೊಳ್ಳಬೇಕು.

ಸಮಾಜದ ಎಲ್ಲಾ ಸಮುದಾಯಗಳಿಗೆ ನ್ಯಾಯ ಸಿಗಬೇಕು ಎಂದರೆ ಜನಸಂಖ್ಯೆಯ ಆಧಾರದ ಮೇಲೆ ದೇಶದ ಜನರಿಗೆ ಸೌಲಭ್ಯಗಳನ್ನು ನೀಡಬೇಕು ಎಂಬುದು ಕಾಂಗ್ರೆಸ್ ಪಕ್ಷದ ಮೂಲ ಆಶಯ, ಸಿದ್ಧಾಂತ, ಬೇಡಿಕೆಯಾಗಿದೆ. ಮುಖ್ಯಮಂತ್ರಿಗಳು ಸಹ ಇದೇ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ. ಕರ್ನಾಟಕ ಸರ್ಕಾರ ಇದಕ್ಕೆ ಬೇಕಾದಂತಹ ಸಹಕಾರ ನೀಡಲಿದೆ ಎಂದರು.

**ಪ್ರಮುಖ ಸುದ್ದಿ**

# ಸನಾತನ ಹಿಂದೂಧರ್ಮ ಶಾಶ್ವತವಾಗಿ ಈ ನೆಲದಲ್ಲಿ ನೆಲೆಯೂರಲು ಜಗದ್ಗುರು ಶಂಕರಚಾರ್ಯರೇ ಮೂಲ ಕಾರಣ: ಟಿ.ರಘುಮೂರ್ತಿ

» ಚಳ್ಳಕೆರೆ

ಜಗದ್ಗುರು ಶಂಕರಚಾರ್ಯರು ಕೇವಲ 26 ವರ್ಷಗಳ ಕಾಲ ಬದುಕಿದ್ದರೂ ಅಮೋಘವಾದ ಸೇವೆಯನ್ನು ಸಲ್ಲಿಸಿದ್ದಾರೆ. ವಿಶೇಷವಾಗಿ ಧಾರ್ಮಿಕ ಕ್ಷೇತ್ರದಲ್ಲಿ ಎಂದೂ ಯಾರೂಮರೆಯಲಾಗದಂತಹಸಾರ್ಥಕರ ಸೇವೆ ಅವರದ್ದಾಗಿದೆ. ವೇದ, ಉಪನಿಷತ್ ಮುಂತಾದ ಧಾರ್ಮಿಕ ವಿಚಾರಧಾರೆಗಳ ಜನಕ ಅವರು ಎಂದು ಕ್ಷೇತ್ರದ ಶಾಸಕ, ಸಣ್ಣಕೈಗಾರಿಕೆ ಅಭಿವೃದ್ದಿಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು.

ಅವರು ಶುಕ್ರವಾರ ನಗರದ ಹಳೇಟೌನ್ ಶ್ರೀರಾಮಮಂದಿರದಲ್ಲಿ ತಾಲ್ಲೂಕು ಬ್ರಾಹ್ಮಣ ಸಂಘ ಹಮ್ಮಿಕೊಂಡಿದ್ದ ಶಂಕರಜಯಂತಿ ಮತ್ತು ಬ್ರಾಹ್ಮಣ ಸಮುದಾಯದ ವಿದ್ಯಾರ್ಥಿಗಳ ಪ್ರತಿಭಾಪುರಸ್ಕಾರ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು. ಶಂಕರಚಾರ್ಯರು ಬಾಲಕರಿದ್ದಾಗಲೇ ಅಪಾರವಾದ ಜ್ಞಾನಭಂಡಾರವನ್ನು ಹೊಂದಿದ್ದರು. ಸಮಾಜದಲ್ಲಿ ಧಾರ್ಮಿಕ ಜಾಗೃತಿಗಾಗಿ ಎಲ್ಲಡೆ ಪ್ರವಾಸಕೈಗೊಂಡು ಹಿಂದೂಧರ್ಮದ ಪರವಾಗಿ ಪ್ರಚಾರ ಕೈಗೊಂಡರು ಎಂದರು.



ಮುಖ್ಯ ಅತಿಥಿಯಾಗಿ ಆಗಮಿಸಿ ಮಾತನಾಡಿದ ಅಖಿಲಕರ್ನಾಟಕ ಬ್ರಾಹ್ಮಣ ಮಹಾಸಭಾದ ಜಿಲ್ಲಾ ಪ್ರತಿನಿಧಿ ಟಿ.ಕೆ.ನಾಗರಾಜರಾವ್, ಜಗದ್ಗುರು ಶಂಕರಚಾರ್ಯರು ಎಲ್ಲರಿಗೂ ತಿಳಿದಂತೆ ಅತ್ಯಂತ ಸೂಕ್ಷ್ಮವಾಗಿ ಎಲ್ಲವನ್ನು ಗಮನಿಸುತ್ತಿದ್ದರು. ಸಮಾಜದ ಮೇಲೆ ಧಾರ್ಮಿಕ ವಿಚಾರಗಳಿಗೆ ತೊಂದರೆ ಉಂಟಾಗುವ ಸಮಯ ಬಂದರೆ ಅವುಗಳನ್ನು ಧೈರ್ಯವಾಗಿ ಎದುರಿಸುತ್ತಿದ್ದರು ಎಂದರು.

ಜಿಲ್ಲಾ ಬ್ರಾಹ್ಮಣ ಸಂಘದ ಮಹಿಳಾ ಘಟಕದ ಅಧ್ಯಕ್ಷೆ ಶಶಿರೇಖಾ ಮಾತನಾಡಿದರು. ಕಾರ್ಯಕ್ರಮದಲ್ಲಿ ಎಸ್‌ಎಸ್‌ಎಲ್‌ಸಿ, ಪಿಯುಸಿಯಲ್ಲಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳನ್ನು ಶಾಸಕ ಟಿ.ರಘುಮೂರ್ತಿ ಸನ್ಮಾನಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ತಾಲ್ಲೂಕು ಬ್ರಾಹ್ಮಣ ಸಂಘದ ಅಧ್ಯಕ್ಷ ಡಾ.ಅನಂತರಾಮ್ ಗೌತಮ್ ಮಾತನಾಡಿ, ಸನಾತನಹಿಂದೂಧರ್ಮವನ್ನುನಾಡಿನೆಲ್ಲೆಡೆ ಪರಿಚಯಿಸಿದ ಕೀರ್ತಿ ಶಂಕರಚಾ ರ್ಯರದ್ದು. ವೇದ, ಉಪನಿಷತ್ತುಗಳ ಬಗ್ಗೆ ಸಮಾಜದ ಎಲ್ಲಾ ವರ್ಗಗಳಿಗೂ ಜಾಗೃತಿ ಉಂಟು ಮಾಡುವ ಕಾರ್ಯ ಮಾಡಿದರು. ಹಿಂದೂಧರ್ಮ ಶಾಶ್ವತವಾಗಿ ನೆಲೆಯೂರಲು ಮೂಲಕಾರಣ ಶಂಕರಚಾರ್ಯರು ಎಂದರು.

ಕಾರ್ಯಕ್ರಮದಲ್ಲಿ ಗೌರವಾಧ್ಯಕ್ಷ ಎಂ.ವಾಸು ದೇವರಾವ್, ಉಪಾಧ್ಯಕ್ಷ ಎಂ. ನಾಗರಾಜರಾವ್, ಪ್ರಧಾನ ಕಾರ್ಯದರ್ಶಿ ಎಂ.ಸತ್ಯನಾರಾ ಯಣರಾವ್, ಖಜಾಂಚಿ ಜಿ.ಕೃಷ್ಣಮೂರ್ತಿ, ಮಹಿಳಾ ಘಟಕದ ಅದ್ಯಕ್ಷೆ ಸೀತಾಲಕ್ಷ್ಮಿ ವಾದಿರಾಜ್, ಸಂಘದ ನಿರ್ದೇರ್ಶಕರಾದ ಶೈಲಜಾಸುಬ್ರಮಣ್ಯ, ಶಾಂತಮ್ಮಸುಬ್ಬುರಾವ್, ಜೆ.ಎಸ್. ಶ್ರೀನಾಥಶರ್ಮ, ಮುರುಳಿಕೃಷ್ಣ, ಸಿ.ಎಸ್. ಗೋಪಿನಾಥ, ಗಂಗಾಧರಭಟ್, ಎ.ಶಿವಕುಮಾರಶರ್ಮ, ಪ್ರದೀಪ್‌ಶರ್ಮ ಮುಂತಾದವರುಭಾಗವಹಿಸಿದ್ದರು. ನಗರದ ಪ್ರಮುಖ ರಸ್ತೆಗಳಲ್ಲಿ ಶಂಕರಚಾರ್ಯರ ಭಾವಚಿತ್ರದ ಮೆರವಣಿಗೆ ನಡೆಯಿತು.

## ಫಾಸ್ಟ್ ನ್ಯೂಸ್

### ಕರ್ತವ್ಯದ ವೇಳೆ ಬಸ್ ನಿಲ್ಲಿಸಿ ನಮಾಜ್: ಚಾಲಕ ಸಸ್ಪೆಂಡ್

■ ಹಾವೇರಿ

ಕರ್ತವ್ಯದ ವೇಳೆಯಲ್ಲೇ ಮಾರ್ಗಮಧ್ಯ ಬಸ್ ನಿಲ್ಲಿಸಿ ನಮಾಜ್ ಮಾಡಿದ್ದ ಚಾಲಕ ಎ.ಆರ್. ಮುಲ್ಲಾನನ್ನು ಅಮಾನತು ಮಾಡಲಾಗಿದೆ.

ಹಾನಗಲ್ ಘಟಕದ ಚಾಲಕ ಎ.ಆರ್. ಮುಲ್ಲಾ ಕಾರ್ಯನಿರತ ವೇಳೆ ರಸ್ತೆ ಪಕ್ಕ ಬಸ್ ನಿಲ್ಲಿಸಿ ನಮಾಜ್ ಮಾಡಿದ್ದರು. ಈ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ಭಾರೀ ವೈರಲ್ ಆಗಿತ್ತು. ಇದರ ಬೆನ್ನಲ್ಲೇ ಇದೀಗ ಕರ್ತವ್ಯಲೋಪ ಆರೋಪದಲ್ಲಿ ಚಾಲಕ ಎ.ಆರ್.ಮುಲ್ಲಾನನ್ನು ಅಮಾನತುಗೊಳಿಸಿ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಶಿಸ್ತುಪಾಲನೆ ಅಧಿಕಾರಿ ಮೇ 1 ಆದೇಶ ಹೊರಡಿಸಿದ್ದಾರೆ. ವಿಚಾರಣೆ ಮುಗಿಯುವವರೆಗೂ ಅಮಾನತು ಮಾಡಿ ಆದೇಶಿಸಿದ್ದು, ಘಟನೆ ಬಗ್ಗೆ ಸಂಪೂರ್ಣ ವಿವರಣೆ ನೀಡುವಂತೆ ಸೂಚನೆ ನೀಡಿದ್ದಾರೆ. ಏಪ್ರಿಲ್ 29ರಂದು ಹುಬ್ಬಳ್ಳಿಯಿಂದ ಹಾವೇರಿ ನಡುವಿನ ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಬಸ್‌ನ ಚಾಲಕ ಕಂ ನಿರ್ವಾಹಕ ಮುಲ್ಲಾ ಮಾರ್ಗಮಧ್ಯೆ ಬಸ್ ನಿಲ್ಲಿಸಿ ನಮಾಜ್ ಮಾಡಿದ್ದರು. ನಮಾಜ್ ಮಾಡುತ್ತಿರುವ ವಿಡಿಯೋವನ್ನು ಪ್ರಯಾಣಿಕನೋರ್ವ ಸೆರೆಹಿಡಿದಿದ್ದ, ಬಳಿಕ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ಫುಲ್ ವೈರಲ್ ಆಗಿದ್ದು, ಡ್ರೈವರ್ ಮುಲ್ಲಾ ನಡೆಗೆ ವ್ಯಾಪಕ ಆಕ್ರೋಶಗಳು ವ್ಯಕ್ತವಾಗಿದ್ದವು.ಈ ಸಂಬಂಧ ವಿಪಕ್ಷ ನಾಯಕ ಆರ್.ಅಶೋಕ್‌ಸರ್ಕಾರದವಿರುದ್ಧಕಿಡಿಕಾರಿದ್ದರು. ಸಿದ್ದರಾಮಯ್ಯರ ಓಲೈಕೆಯ ಪರಿಣಾಮವಾಗಿ ಬಸ್‌ನಲ್ಲಿ ನಮಾಜ್ ಮಾಡಿದ್ದಾನೆ ಎಂದು ಮುಖ್ಯಮಂತ್ರಿ ವಿರುದ್ಧ ವಾಗ್ದಾಳಿ ನಡೆಸಿದ್ದರು. ಅಲ್ಲದೇ ಸಾಮಾಜಿಕ ಜಾಲತಾಣಗಳಲ್ಲಿ ಪರ-ವಿರೋಧದ ಚರ್ಚೆಗಳು ಆಗುತ್ತಲೇ ಇವೆ. ಕೆಲವರು ಮುಲ್ಲಾ ನಡೆಯನ್ನು ಸರಿ ಎನ್ನುತ್ತಿದ್ದರೆ, ಇನ್ನೂ ಕೆಲವರು ವಿರೋಧ ವ್ಯಕ್ತಪಡಿಸಿದ್ದಾರೆ.ಬಸ್‌ಗಳಲ್ಲಿ ಹಿಂದೂ ಫೋಟೋಗಳನ್ನು ಹಾಕುತ್ತಾರೆ. ದೇವಸ್ಥಾನ ಬಂದಾಗ ಬಸ್‌ನಲ್ಲಿದ್ದುಕೊಂಡೇ ಕೈಮುಗಿಯುತ್ತಾರೆ. ದೇವನೊಬ್ಬ ನಾಮ ಹಲವು ಎಂದು ಕೆಲವರು ವಾದಿಸಿದ್ದಾರೆ.

ಏ.29ರಂದು ಹುಬ್ಬಳ್ಳಿಯಿಂದ ಹಾವೇರಿ ನಡುವಿನ ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಬಸ್‌ನ ಚಾಲಕ ಕಂ ನಿರ್ವಾಹಕ ಮಾರ್ಗಮಧ್ಯೆ ಬಸ್ ನಿಲ್ಲಿಸಿ ನಮಾಜ್ ಮಾಡಿರುವ ಕುರಿತು ವರದಿಯಾಗಿದೆ. ಪ್ರತಿ ವ್ಯಕ್ತಿಗೂ ಧಾರ್ಮಿಕ ಸ್ವಾತಂತ್ರ್ಯದ ಹಕ್ಕಿದೆ. ಆದರೆ, ಸಾರ್ವಜನಿಕ ಸೇವೆಯಲ್ಲಿರುವವರು ಕರ್ತವ್ಯ ವೇಳೆ ಹೊರತುಪಡಿಸಿ ತಮ್ಮ ಧರ್ಮವನ್ನು ಪಾಲಿಸಬಹುದಾಗಿದೆ. ಹೀಗಾಗಿ ಕರ್ತವ್ಯದ ಸಮಯದಲ್ಲಿ ಮಾರ್ಗ ಮಧ್ಯೆ ಬಸ್ ನಿಲ್ಲಿಸಿ ನಮಾಜ್ ಆಕ್ಷೇಪಾರ್ಹ. ಈ ವಿಡಿಯೋಗೆ ಸಂಬಂಧಿಸಿ ಸೂಕ್ತ ತನಿಖೆ ನಡೆಸಿ, ಸಿಬ್ಬಂದಿ ತಪ್ಪು ಮಾಡಿದ್ದರೆ ಶಿಸ್ತು ಕ್ರಮ ಕೈಗೊಳ್ಳುವಂತೆ ರಾಮಲಿಂಗಾರೆಡ್ಡಿ ಆದೇಶಿಸಿದ್ದರು. ಅಲ್ಲದೆ, ಇನ್ನು ಮುಂದೆ ಈ ರೀತಿಯ ಘಟನೆ ಮರುಕಳಿಸದಂತೆ ಎಚ್ಚರವಹಿಸಬೇಕು ಎಂದೂ ಸೂಚಿಸಿದ್ದರು. ಇದರ ಬೆನ್ನಲ್ಲೇ ಇಂದು ಕಾರ್ಮಿಕರ ದಿನಾಚರಣೆಯಂದೇ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಶಿಸ್ತುಪಾಲನೆ ಅಧಿಕಾರಿ ಡ್ರೈವರ್ ಮುಲ್ಲಾನನ್ನು ಕರ್ತವ್ಯದಿಂದ ಸಸ್ಪಂಡ್ ಮಾಡಿ ಆದೇಶ ಹೊರಡಿಸಿದ್ದಾರೆ. ಅಲ್ಲದೇ ಘಟನೆ ಬಗ್ಗೆ ಸಂಪೂರ್ಣ ವಿವರಣೆ ನೀಡುವಂತೆ ತಿಳಿಸಿದ್ದಾರೆ.

### ಮಕ್ಕಳ ಬೇಸಿಗೆ ಶಿಬಿರ: ಅರ್ಜಿ ಆಹ್ವಾನ



» ಚಿತ್ರದುರ್ಗ

ಬೆಂಗಳೂರಿನ ರಾಜ್ಯ ಬಾಲಭವನ ಸೊಸೈಟಿ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಬಾಲಭವನ ಸಮಿತಿ ಸಂಯುಕ್ತ ಆಶ್ರಯದಲ್ಲಿ ಮೇ 12 ರಿಂದ 26 ಮೇ ವರೆಗೆ 05 ರಿಂದ16 ವರ್ಷದ ಮಕ್ಕಳಿಗಾಗಿ ಜಿಲ್ಲಾ ಮಟ್ಟದ ಮಕ್ಕಳ ಬೇಸಿಗೆ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ. ಶಿಬಿರದಲ್ಲಿ ಮಕ್ಕಳಿಗೆ ಯೋಗ ಧ್ಯಾನ, ಚಿತ್ರಕಲೆ, ಕಸದಿಂದ ರಸ, ಜೇಡಿ ಮಣ್ಣಿನ ಕಲೆ, ಮೇಹಂದಿ, ಕರಕುಶಲತೆ, ಸಮೂಹ ನೃತ್ಯ, ಸಂಗೀತ, ಮಾತನಾಡುವ ಗೊಂಬೆ, ಆಹ್ವಾನಿತ ಅಥಿತಿಗಳಿಂದ ಉಪನ್ಯಾಸ ಸೇರಿದಂತೆ ಮುಂತಾದ ವಿಷಯಗಳ ತರಬೇತಿ ನೀಡಲಾಗುವುದು. ಆಸಕ್ತ ಪೋಷಕರು ಮತ್ತು ಮಕ್ಕಳು ಮೇ 09 ರ ಸಂಜೆ 5:30ರ ಒಳಗೆ ಹೆಸರು ನೊಂದಾಯಿಸಬೇಕು. ಹೆಚ್ಚಿನ ಮಾಹಿತಿಗಾಗಿ ವೀರವನಿತೆ ಒನಕೆ ಓಬವ್ವ ಕ್ರೀಡಾಂಗಣದಮುಂಭಾಗದಮಹಿಳಾಮತ್ತುಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರು ಹಾಗೂ ಜಿಲ್ಲಾ ಬಾಲಭವನ ಸಮಿತಿ ಕಾರ್ಯದರ್ಶಿಗಳ ಕಚೇರಿಗೆ ಭೇಟಿ ನೀಡಬಹುದು. ಕಾರ್ಯಕ್ರಮ ಸಂಯೋಜಕರ ಫೋನ್ ಸಂಖ್ಯೆ 7259551325 ಹಾಗೂ ದೂರವಾಣಿ ಸಂಖ್ಯೆ-08194-235259 ಕರೆ ಮಾಡುವಂತೆ ಪ್ರಕಟಣೆ ತಿಳಿಸಿದೆ.

# ಕೋಳಿ ಫಾರಂಗೆ 40 ಎಕರೆ ಭೂಮಿ: ಪ್ರತಿಭಟನೆ

» ಚಿತ್ರದುರ್ಗ



ರೈತರ ಬದುಕು ಮತ್ತು ಪರಿಸರ ಉಳಿವಿನ ಪ್ರಶ್ನೆಯಾಗಿರುವುದರಿಂದ ಜೆ.ಎನ್. ಕೋಟೆ ಬಳಿ ಕೋಳಿ ಫಾರಂಗೆ ಅವಕಾಶ ನೀಡಬಾರದೆಂದು ಕರ್ನಾಟಕ ರಾಜ್ಯ ರೈತ ಸಂಘದ ರಾಜ್ಯಾಧ್ಯಕ್ಷ ಬಗಡಲಪುರ ನಾಗೇಂದ್ರ ಜಿಲ್ಲಾಡಳಿತವನ್ನು ಒತ್ತಾಯಿಸಿದರು.

ಜೆ.ಎನ್.ಕೋಟೆ ಸಮೀಪ ಬೂತಪ್ಪನ ಮರ ಬಸ್‌ಸ್ಟಾಂಡ್ ಬಳಿ 40 ಎಕರೆ ಪ್ರದೇಶದಲ್ಲಿ ಆಂಧ್ರಪ್ರದೇಶದ ಉದ್ಯಮಿಯೊಬ್ಬರು ಕೋಳಿ ಫಾರಂ ನಡೆಸಲು ಗ್ರಾಮ ಪಂಚಾಯಿತಿಯಿಂದ ಅನುಮತಿ ನೀಡಿರುವುದನ್ನು ವಿರೋಧಿಸಿ ಜೆ.ಎನ್.ಕೋಟೆ ಹತ್ತಿರ ಶುಕ್ರವಾರ ಹಮ್ಮಿಕೊಳ್ಳಲಾಗಿದ್ದ ರೈತರ ಹಕ್ಕೊತ್ತಾಯ ಪ್ರತಿಭಟನೆಯನ್ನುದ್ದೇಶಿಸಿ ಮಾತನಾಡಿದರು.

ಪ್ರಧಾನಿಯಿಂದ ಹಿಡಿದು ಜಿಲ್ಲಾಧಿಕಾರಿ ಇವರುಗಳೆಲ್ಲಾ ಜನ ಸೇವಕರೆ ವಿನಃ ದೊರೆಗಳಲ್ಲ. ಕೋಳಿ ಫಾರಂಗೆ ಅನುಮತಿ ನೀಡಿರುವ ಪಿ.ಡಿ.ಓ. ವಿರುದ್ದ ಕ್ರಮ ಕೈಗೊಳ್ಳಬೇಕು ಇಲ್ಲವಾದಲ್ಲಿ ಜಿಲ್ಲಾಧಿಕಾರಿ, ಜಿಲ್ಲಾ ಪಂಚಾಯಿತಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರ ನಿವಾಸದ ಎದುರು ಮುಷ್ಕರ ನಡೆಸಲಾಗುವುದೆಂದು ಎಚ್ಚರಿಸಿದ ಬಗಡಲಪುರ ನಾಗೇಂದ್ರ ಇಲ್ಲಿ ಕೈಗೊಳ್ಳುವ ನಿರ್ಣಯಕ್ಕೆ ಎಲ್ಲಾ ರೈತರು ಬದ್ದರಾಗಿರಬೇಕು. ರೈತ ಚಳುವಳಿಯಲ್ಲಿ ಶಿಸ್ತು ಕಡಿಮೆಯಾಗುತ್ತಿದೆ. ದಯನೀಯ ಸ್ಥಿತಿಯಲ್ಲಿ ಅಧಿಕಾರಿಗಳ ಮುಂದೆ ಕೈಮುಗಿದು ನಿಂತುಕೊಂಡರೆ ಇಂತಹ ಸಮಸ್ಯೆಗಳನ್ನು ಎದುರಿಸಬೇಕಾಗುತ್ತದೆಂದು ಹೇಳಿದರು.

ವಿಧಾನಸೌದದ ಮೂರನೆ ಮಹಡಿಯಲ್ಲಿ ಕುಳಿತು ಆಡಳಿತ ನಡೆಸುತ್ತಿರುವ ರಾಜಕಾರಣಿಗಳು ರೈತರನ್ನು ಹಗುರವಾಗಿ ಕಾಣುತ್ತಿರುವುದರಿಂದ ಬೀದಿಗಿಳಿದು ಹೋರಾಡಬೇಕಿದೆ. ನಲವತ್ತು ಎಕರೆ ಜಮೀನನ್ನು ಕೃಷಿಕನಷ್ಟೆ ಕೊಳ್ಳಬೇಕೆಂಬ ನಿಯಮವಿತ್ತು. ಸರ್ಕಾರ ತಿದ್ದುಪಡಿ ತಂದು ಕೃಷಿಕನಲ್ಲದವನು ಭೂಮಿಯನ್ನು ಕೊಂಡುಕೊಳ್ಳಬಹುದೆಂಬ ಕಾಯಿದೆ ಜಾರಿಗೆ ತಂದಿರುವುದರಿಂದ ಆಂಧ್ರದ ಉದ್ಯಮಿಯೊಬ್ಬರಿಗೆ ಕೋಳಿ ಫಾರಂ ನಡೆಸಲು ಅನುಮತಿ ನೀಡಿ ರೈತರಿಗೆ ದ್ರೋಹವೆಸಗುತ್ತಿರುವುದನ್ನು ನಾವುಗಳು ಸಹಿಸುವುದಿಲ್ಲ. ಯಾವುದೇ ಕಾರಣಕ್ಕೂ ಸುತ್ತಮುತ್ತಲಿನ ಎಂಟು ಹಳ್ಳಿಗಳ ರೈತರಿಗೆ ಜನಸಾಮಾನ್ಯರಿಗೆ ಹಾಗೂ ಪರಿಸರಕ್ಕೆ ಹಾನಿಯಾಗಬಾರದೆಂದರೆ ಕೋಳಿ ಫಾರಂಗೆ ನೀಡಿರುವ ಅನುಮತಿಯನ್ನು ರದ್ದುಪಡಿಸಬೇಕೆಂದರು.

ಕೋಳಿ ಫಾರಂನಿಂದ ನೊಣಗಳ ಹಾವಳಿ ಜಾಸ್ತಿಯಾಗಿ ದುರ್ವಾಸನೆ ಬೀರುತ್ತದೆ. ಹಸಿರು ಟವಲ್‌ಗೆ ತ್ಯಾಗ ಬಲಿದಾನದ ಇತಿಹಾಸವಿದೆ. ಹೆಗಲ ಮೇಲೆ ಟವಲ್ ಇದ್ದರೆ ಶಕ್ತಿ ಬರುತ್ತದೆ. ಮುಂದಿನ ದಿನಗಳಲ್ಲಿ ರೈತರ ಪಂಪ್‌ಸೆಟ್‌ಗಳಿಗೆ ಸ್ಮಾರ್ಟ್ ಮೀಟರನ್ನು ಸರ್ಕಾರ ಅಳವಡಿಸಲು ಹೊರಟಿದೆ. ಇದರ ವಿರುದ್ದ ದೊಡ್ಡ ಚಳುವಳಿಗೆ ರೈತರು ಸಿದ್ದರಾಗಬೇಕೆಂದು ಕರೆ ನೀಡಿದರು.

ಕರ್ನಾಟಕ ರಾಜ್ಯ ರೈತ ಸಂಘದ ಹಿರಿಯ ಉಪಾಧ್ಯಕ್ಷ ಕೆ.ಪಿ.ಭೂತಯ್ಯ ಮಾತನಾಡಿ ಜೆ.ಎನ್.ಕೋಟೆ ಸಮೀಪ ಯಾವುದೇ ಕಾರಣಕ್ಕೂ ಆಂಧ್ರದ ಉದ್ಯಮಿ ಕೋಳಿ ಫಾರಂ ನಡೆಸಲು ನಾವುಗಳು ಅವಕಾಶ ಕೊಡುವುದಿಲ್ಲ. ಇದರಿಂದ ರೈತರ ಬದುಕಿನ ಮೇಲೆ ದುಷ್ಪರಿಣಾಮ ಬೀರುವುದಲ್ಲದೆ ಆರೋಗ್ಯ ಹದಗೆಡುತ್ತದೆ. ಹಾಗಾಗಿ ಜಿಲ್ಲಾಧಿಕಾರಿಗಳು ಈ ವಿಚಾರವನ್ನು ಗಂಭೀರವಾಗಿ ಪರಿಗಣಿಸಿ ಪಿ.ಡಿ.ಓ. ಮೇಲೆ ಶಿಸ್ತು ಕ್ರಮ ಜರುಗಿಸಿ ಕೋಳಿ ಫಾರಂಗೆ ನೀಡಿರುವ ಅನುಮತಿಯನ್ನು ರದ್ದುಪಡಿಸಬೇಕೆಂದು ಆಗ್ರಹಿಸಿದರು.

ಕರ್ನಾಟಕ ರಾಜ್ಯ ರೈತ ಸಂಘದ ರಾಜ್ಯ ಉಪಾಧ್ಯಕ್ಷ ಬಸ್ತಿಹಳ್ಳಿ ಜಿ.ಸುರೇಶ್‌ಬಾಬು ಮಾತನಾಡುತ್ತ ಕುಕ್ಕಟೋದ್ಯಮಕ್ಕೆ ನಾವುಗಳ್ಯಾರು ವಿರೋಧಿಗಳಲ್ಲ. ಆದರೆ ಕೋಳಿಫಾರಂನಿಂದಾಗುವಅನಾಹುತವನ್ನು ಸಹಿಸುವುದಿಲ್ಲ. ಮಳೆಗಾಲ ಬಂತೆಂದರೆ ಕೋಳಿ ಫಾರಂನಿಂದ ಹೊರಬರುವ ತ್ಯಾಜ್ಯಗಳು ಹರಿದು ಕೆರೆಗೆ ಸೇರುವುದರಿಂದ ಇಡಿ ಕೆರೆ ನೀರು ಕಲುಷಿತಗೊಳ್ಳುವುದಲ್ಲದೆ ಜಲಚರಗಳು ಸಾವನ್ನಪ್ಪುತ್ತವೆ. ಇವೆಲ್ಲಕ್ಕೂ ಮುಖ್ಯವಾಗಿ ರೈತರ ಬೆಳೆಗಳಿಗೆ ಹಾನಿಯಾಗುವುದಲ್ಲದೆ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುವುದನ್ನು ತಡೆಯಬೇಕಾಗಿರುವುದರಿಂದ ಕೋಳಿ ಫಾರಂಗೆ ಅವಕಾಶ ನೀಡಬಾರದೆಂದು ಒತ್ತಾಯಿಸಿದರು.

ಕರ್ನಾಟಕರಾಜ್ಯರೈತಸಂಘದಜಿಲ್ಲಾಧ್ಯಕ್ಷ ಧನಂಜಯ ಹಂಪಯ್ಯನಮಾಳಿಗೆ, ಉಪಾಧ್ಯಕ್ಷ ಚಿಕ್ಕಪ್ಪನಹಳ್ಳಿ ರುದ್ರಸ್ವಾಮಿ, ಕರ್ನಾಟಕ ರಾಜ್ಯ ರೈತ ಸಂಘದ ಪ್ರಧಾನ ಕಾರ್ಯದರ್ಶಿ ಎನ್.ಡಿ. ವಸಂತಕುಮಾರ್, ರಾಜ್ಯ ವಲಯ ಉಪಾಧ್ಯಕ್ಷ ಹೊರಕೇರಪ್ಪ, ಜಿಲ್ಲಾ ಗೌರವಾಧ್ಯಕ್ಷ ತಿಪ್ಪೇಸ್ವಾಮಿ ಮಲ್ಲಾಪುರ, ಡಿ.ಎಸ್.ಹಳ್ಳಿ ಗ್ರಾಮ ಪಂಚಾಯಿತಿ ಉಪಾಧ್ಯಕ್ಷೆ ಹಾಗೂ ರೈತ ಸಂಘದ ಜಿಲ್ಲಾ ಸಂಚಾಲಕಿ ಸುಧಾ, ಜೆ.ಎನ್.ಕೋಟೆ ಗ್ರಾಮ ಪಂಚಾಯಿತಿ ಉಪಾಧ್ಯಕ್ಷೆ ನಾಗಮ್ಮ ಇನ್ನು ಮುಂತಾದವರು ವೇದಿಕೆಯಲ್ಲಿದ್ದರು.

ಜೆ.ಎನ್.ಕೋಟೆ, ನರೇನಹಾಳು, ಕಸವನಹಳ್ಳಿ, ಸಜ್ಜನಕೆರೆ, ಕಳ್ಳಿರೊಪ್ಪ, ಗೊಲ್ಲನಕಟ್ಟೆ, ಪಲ್ಲವಗೆರೆ, ಜೋಡಿ ಚಿಕ್ಕೇನಹಳ್ಳಿ, ಗೊಲ್ಲರಹಟ್ಟಿ, ಲಂಬಾಣಿಹಟ್ಟಿ, ಎಣ್ಣೆಗೆರೆ ಓರಗುಂಟರಮಾಳಿಗೆ, ದೊಡ್ಡಸಿದ್ದವ್ವನಹಳ್ಳಿ ಗ್ರಾಮದ ರೈತರು ಹಕ್ಕೊತ್ತಾಯ ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

# ಸ್ಥಳದಲ್ಲೇ ಚಿತ್ರ ಬರೆಯುವ ಸ್ಪರ್ಧೆ ಸಮಾರೋಪ

» ಚಿತ್ರದುರ್ಗ



ನೀವು ನೋಡುವುದನ್ನು ಚಿತ್ರಿಸುವುದು ಸುಲಭವಾಗಿದ್ದರೂ, ಚಿತ್ರಕಲೆಯ ಹಿಂದಿನ ಅರ್ಥವನ್ನು ಅರ್ಥಮಾಡಿ ಕೊಳ್ಳುವುದು ಕೆಲವೊಮ್ಮೆ ಕಷ್ಟಕರವಾಗಿರುತ್ತದೆ. ಚಿತ್ರಕಲೆಯ ಆಳ ಮತ್ತು ಮೌಲ್ಯವು ಅಂತಹದ್ದಾಗಿದೆ ಎಂದು ಜಿಲ್ಲಾ ಶರಣ ಸಾಹಿತ್ಯ ಪರಿಷತ್‌ನ ಅಧ್ಯಕ್ಷರಾದ ಕೆ.ಎಂ.ವಿರೇಶ್ ತಿಳಿಸಿದ್ದಾರೆ.

ಕಲಾ ಚೈತನ್ಯ ಸೇವಾ ಸಂಸ್ಥೆ (ರಿ) ಸಾಂಸ್ಕೃತಿಕ ಕಲಾ ಸಂಘ ಚಿತ್ರದುರ್ಗ ಇವರ ಸಂಯುಕ್ತ ಆಶ್ರಯದಲ್ಲಿ ಕಲಾವಿದ ಲಿಯನಾರ್ಡೊ ಡಾವಿನ್ಸಿರವರ ಜನ್ಮ ದಿನದ ಸವಿನೆನಪಿಗಾಗಿ ವಿಶ್ವ ಕಲಾ ದಿನಾಚರಣೆ ಪ್ರಯುಕ್ತ ಧರ್ಮಶಾಲಾ ರಸ್ತೆಯಲ್ಲಿನ ಕೋಮಲ ನರ್ಸಿಂಗ್ ಹೊಂ ಹತ್ತಿರ ಸೀತಾರಾಮ ಮಂದಿರ ನಡೆಸಲಾದ ಮಕ್ಕಳಿಗೆ ಸ್ಥಳದಲ್ಲೇಚಿತ್ರಬರೆಯುವಸ್ಪರ್ಧೆಯಸಮಾರೋಪ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಚಿತ್ರಕಲೆ ನಮ್ಮ ಮಕ್ಕಳು ತಮ್ಮನ್ನು ತಾವು ವ್ಯಕಪಡಿಸಿಕೊಳ್ಳುವ ಕಲೆ, ಮತ್ತು ಅವರ ಆಲೋಚನೆಗಳು ಎಷ್ಟರ ಮಟ್ಟಿಗೆ ಹೋಗುತ್ತವೆ ಎಂದು ನಾವು ಊಹಿಸಲೂ ಸಾಧ್ಯವಿಲ್ಲ. ಹಿರಿಯರಾದ ನಾವು ಪ್ರತಿಭಾನ್ವಿತ ಮಕ್ಕಳಿಗೆ ಚಿತ್ರಕಲೆಯಲ್ಲಿ ನೈಸರ್ಗಿಕ ಕೌಶಲ್ಯವಿಲ್ಲದಿದ್ದರೂ, ಚಿತ್ರಕಲೆಯನ್ನು ಅಭ್ಯಾಸ ಮಾಡಲು ಮತ್ತು ಅವರ ಕಲೆಯನ್ನು ಪರಿಷ್ಕರಿಸಲು ಪ್ರೋತ್ಸಾಹಿಸಬೇಕು. ಈ ಚಿತ್ರಕಲೆ ಪ್ರಬಂಧವು ಮಕ್ಕಳ ಕನಸುಗಳು ಮತ್ತು ಪ್ರತಿಭೆಗಳನ್ನು ನಾವು ಬೆಂಬಲಿಸಿದರೆ, ಅವರು ಖಂಡಿತವಾಗಿಯೂ ಬಹಳ ದೂರ ಹೋಗುತ್ತಾರೆ ಎಂದು ತೋರಿಸುತ್ತದೆ. ಹೀಗಾಗಿ, ಅವರು ತಮ್ಮನ್ನು ತಾವು ಅನುಮಾನಿಸುವುದನ್ನು ನಿಲ್ಲಿಸುತ್ತಾರೆ ಮತ್ತು ವಾಸ್ತವವಾಗಿ, ಚಿತ್ರಕಲೆಯ ಮೂಲಕ ಅದ್ಭುತಗಳನ್ನು ಸೃಷ್ಟಿಸಬಹುದು ಎಂದು ನಂಬುತ್ತಾರೆ ಎಂದರು.

ಪತ್ರಕರ್ತರಾದ ಉಜ್ಜನಪ್ಪ ಮಾತನಾಡಿ, ಕಲಾವಿದ ಲಿಯನಾರ್ಡೊ ಡಾವಿನ್ಸಿರವರ ಜನ್ಮ ದಿನದ ಸವಿನೆನಪಿಗಾಗಿ ಈ ರೀತಿಯ ಚಿಕತ್ರಕಲಾ ಸ್ಪರ್ದೆಯನ್ನು ನಡೆಸುತ್ತಿರುವುದು ಉತ್ತಮವಾದ ಕಾರ್ಯವಾಗಿದೆ. ಇವರು ರಚನೆ ಮಾಡಿದ ಮನೋಲಿಸ್ ಚಿತ್ರ ಒಂದೊಂದು ಕಡೆಯಿಂದ ಒಂದೂಂದು ರೀತಿಯಲ್ಲಿ ಕಾಣುತ್ತಿತ್ತು, ಇದನ್ನು ನೋಡಿದವರು ಆಶ್ಚರ್ಯ ಚಿಕಿತರಾಗುತ್ತಿದ್ದರು. ಹೊರಗಿನ ಸುಂದರ ಪ್ರಕೃತಿಯನ್ನು ನೋಡುವುದರಲ್ಲಿ ಶಾಂತಿಯನ್ನು ಕಂಡುಕೊಳ್ಳುವ ಜನರಿದ್ದಾರೆ, ಆದರೆ ಈ ಸೌಂದರ್ಯವನ್ನು ತಮ್ಮ ವರ್ಣಚಿತ್ರಗಳಲ್ಲಿ ಸೆರೆಹಿಡಿಯುವಲ್ಲಿ ತೃಪ್ತಿಯನ್ನು ಕಂಡುಕೊಳ್ಳುವ ಕೆಲವರು ಇದ್ದಾರೆ. ಈ ಚಿತ್ರಕಲೆ ಪ್ರಬಂಧವು ಸರಳ ಮತ್ತು ನಿರೂಪಣಾ ಸ್ವರೂಪವನ್ನು ಹೊಂದಿರುವುದರಿಂದ, ಮಕ್ಕಳು ಅದನ್ನು ಸುಲಭವಾಗಿ ಅರ್ಥಮಾಡಿಕೊಳ್ಳಬಹುದು. ಮಕ್ಕಳಿಗೆ ವೈವಿಧ್ಯಮಯ ಆಸಕ್ತಿಗಳಿರುತ್ತವೆ, ಮತ್ತು ಅವರು ಕಲೆ ಮತ್ತು ಚಿತ್ರಕಲೆಯನ್ನು ಇಷ್ಟಪಡುತ್ತಾರೆ ಬಣ್ಣಗಳು, ಕುಂಚಗಳು ಮತ್ತು ಕಾಗದವನ್ನು ಖರೀದಿಸುವುದು ಒಳ್ಳೆಯದು. ಹವ್ಯಾಸವಾಗಿ ಚಿತ್ರಕಲೆ ಅವರಿಗೆ ವಿಶ್ರಾಂತಿ ಮತ್ತು ಆನಂದಿಸಲು ಸಹಾಯ ಮಾಡುತ್ತದೆ, ಇದು ಅವರ ಕಲ್ಪನಾಶಕ್ತಿ ಮತ್ತು ಸೃಜನಶೀಲ ಕೌಶಲ್ಯಗಳನ್ನು ಅಭಿವೃದ್ಧಿಪಡಿಸುವುದರ ಜೊತೆಗೆ ಅವರ ಕೈ-ಕಣ್ಣಿನ ಸಮನ್ವಯವನ್ನು ಸುಧಾರಿಸುತ್ತದೆ ಎಂದರು.

ಕಲಾವಿದರಾದ ನಾಗರಾಜ್ ಬೇದ್ರೆ ಮಾತನಾಡಿ, ಚಿಕ್ಕ ವಯಸ್ಸಿನಲ್ಲೇ ಅವರಿಗೆ ಚಿತ್ರಕಲೆಯನ್ನು ಪರಿಚಯಿಸುವುದು ಒಳ್ಳೆಯದೇ ಆದರೂ, ನಾವು ಅವರ ತಟ್ಟೆಗಳನ್ನು ಅತಿಯಾಗಿ ತುಂಬಿಸಬಾರದು. ಮೊದಲು, ಅವರಿಗೆ ಸಣ್ಣ ಕ್ಯಾನ್ವಾಸ್‌ಗಳನ್ನು ನೀಡಿ ಮತ್ತು ಹೊಸದನ್ನು ರೂಪಿಸಲು ಬಣ್ಣಗಳನ್ನು ಮಿಶ್ರಣ ಮಾಡುವುದು ಹೇಗೆ ಎಂದು ಕಲಿಯಲು ಬಿಡಿ. ಅವರು ಬಣ್ಣಗಳೊಂದಿಗೆ ಪರಿಚಿತರಾದ ನಂತರ, ಚಿತ್ರಿಸಲು ನಿರ್ದಿಷ್ಟ ವಿಷಯಗಳು ಅಥವಾ ಥೀಮ್‌ಗಳನ್ನು ನೀಡಿ. ಅಲ್ಲದೆ, ಜಲವರ್ಣ ಚಿತ್ರಕಲೆ, ಎಣ್ಣೆ ಚಿತ್ರಕಲೆ, ಅಕ್ರಿಲಿಕ್ ಚಿತ್ರಕಲೆ ಮುಂತಾದ ವಿವಿಧ ರೀತಿಯ ವರ್ಣಚಿತ್ರಗಳನ್ನು ಅವರಿಗೆ ಪ್ರಸ್ತುತಪಡಿಸಿ ಎಂದು ತಿಳಿಸಿದರು.

## ವಾಸವಿ ಜಯಂತಿ ಸಪ್ತೋತ್ಸವ ವೈಭವ



» ಚಿತ್ರದುರ್ಗ

ಆರ್ಯವೈಶ್ಯ ಸಮುದಾಯ ಧಾರ್ಮಿಕ, ಶೈಕ್ಷಣಿಕ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ಸದಾ ನೆರವು ನೀಡುತ್ತಿದ್ದು ದಾನಶೀಲತೆಗೆ ಹೆಸರಾಗಿದೆ ಎಂದು ಆರ್ಯವೈಶ್ಯ ಸಂಘದ ಅಧ್ಯಕ್ಷ ಎಲ್.ಇ. ಶ್ರೀನಿವಾಸ ಬಾಬು ತಿಳಿಸಿದರು.ಆರ್ಯವೈಶ್ಯ ಸಂಘ ಹಾಗೂ ಸಹ ಸಂಸ್ಥೆಗಳ ಸಹಯೋಗದಲ್ಲಿ ವಾಸವಿ ಜಯಂತಿ ಸಪ್ತೋತ್ಸವ ಉದ್ಘಾಟನೆ ನೆರವೇರಿಸಿ ಮಾತನಾಡಿ, ಆರ್ಯವೈಶ್ಯರ ಧಾರ್ಮಿಕ ಅಸ್ಮಿತೆಯೆನಿಸಿರುವ ಶ್ರೀ ಕನ್ಯಕಾಪರಮೇಶ್ವರಿ ಜಯಂತಿಯನ್ನು ಈ ಬಾರಿ ವಿಶೇಷವಾಗಿ ಸಾಂಸ್ಕೃತಿಕ ಹಾಗೂ ಧಾರ್ಮಿಕ ಸಪ್ತೋತ್ಸವವಾಗಿ ಆಚರಿಸಲಿರುವುದಾಗಿ ಹೇಳಿದರು.ಇದೇ ದಿನ ಚಿತ್ರದುರ್ಗದ ವಾಸವಿ ವಿದ್ಯಾ ಸಂಸ್ಥೆಯ ಪ್ರಾಯೋಜಕತ್ವದಲ್ಲಿ ಭರತನಾಟ್ಯ, ವಿವಿಧ ಶಕ್ತಿ ದೇವತೆಗಳ ಸಂಕೇತಿಸುವ ನೃತ್ಯ, ಪ್ರಹಸನ, ಮೊದಲಾದ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಸಾದರಪಡಿಸುವ ಮೂಲಕ ಕಾರ್ಯಕ್ರಮ ಕಳೆಗಟ್ಟಿಸಿದರು. ಉಡುಪಿ ಶ್ರೀ ಕೃಷ್ಣಚಾರ್ಯ ಜೋಷಿ, ಗುರು ರಾಘವೇಂದ್ರ ಮಠ ಮಂತ್ರಾಲಯ ಇವರಿಂದ ಧಾರ್ಮಿಕ ಕಾರ್ಯಕ್ರಮದ ಅಂಗವಾಗಿ ಭಾಗವತ ಪ್ರವಚನ ಏರ್ಪಡಿಸಲಾಗಿತ್ತು.

ಅವರು ತಮ್ಮ ಮಾತುಗಳಲ್ಲಿ ಬದುಕಿಗಾಗಿ ಹಣಬೇಕೇ ಹೊರತು ಹಣವೇ ಬದುಕಲ್ಲವೆಂದು ಹೇಳುತ್ತಾ ವಿವಿಧ ಪ್ರಾಣಿ ಪಕ್ಷಿಗಳು ಹೊಟ್ಟೆ ಪಾಡಿಗಾಗಿ ಯಾವುದೇ ಶಾಶ್ವತ ವ್ಯವಸ್ಥೆ ಮಾಡಿಕೊಳ್ಳುವುದಿಲ್ಲ ಆದರೆ ಅತ್ಯಾಸೆಗೆ ಬಲಿಯಾದ ಮನುಷ್ಯರು ಮಾತ್ರ ಹೆಚ್ಚು ಹೆಚ್ಚಾಗಿ ಸಂಗ್ರಹಣೆ ಮಾಡುತ್ತಾರೆ. ಉತ್ತಮ ಮನಸ್ಸಿಗೆ ಉದಾಹರಣೆ ಗಜೇಂದ್ರ ಮೋಕ್ಷ, ಇಂದ್ರದ್ಯುಮ್ನ ಶ್ರವಣ ಕುಮಾರ ಮೊದಲಾದವರ ವೃತ್ತಾಂತವನ್ನು ವಿವರಿಸಿ, ಲೌಕಿಕ ತತ್ವಗಳನ್ನು ವಿವರಿಸಿದರು.ವಾಸವಿ ವಿದ್ಯಾ ಸಂಸ್ಥೆಯ ಅಧ್ಯಕ್ಷರಾದ ಸತ್ಯನಾರಾಯಣ ಶೆಟ್ಟಿಯವರು ಪ್ರವಚನಕಾರರನ್ನು ಪರಿಚಯಿಸಿದರು. ಸಭಾ ಕಾರ್ಯಕ್ರಮದ ನಂತರ ಶ್ರೀ ಕನ್ಯಕಾಪರಮೇಶ್ವರಿ ದೇಗುಲದಲ್ಲಿ ಮಹಾ ಮಂಗಳಾರತಿಯ ನಂತರ ಸಪ್ತಾಹದ ಮೊದಲ ದಿನದ ಕಾರ್ಯಕ್ರಮ ಸಂಪನ್ನಗೊಂಡವು.

## ಪ್ರಮುಖ ಸುದ್ದಿ

# ಉಪಜಾತಿ ಸಮೀಕ್ಷೆ: ಬಂಜಾರ (ಲಂಬಾಣಿ) ಎಂದು ಬರೆಸಿ

» ಚಿತ್ರದುರ್ಗ



ಪರಿಶಿಷ್ಟ ಜಾತಿಯಲ್ಲಿ ಒಳ ಮೀಸಲಾತಿ ಕಲ್ಪಿಸುವುದಕ್ಕಾಗಿ ರಾಜ್ಯಾದ್ಯಂತ ಮೇ 05 ರಿಂದ 17ರವರೆಗೆ ಪರಿಶಿಷ್ಟ ಜಾತಿ, ಉಪಜಾತಿ ಸಮಸ್ಯೆಸಮೀಕ್ಷೆನಡೆಯಲಿದೆ ಈ ಸಮಯದಲ್ಲಿ ಒಳ ಮೀಸಲಾತಿ ಸಮೀಕ್ಷೆಗೆ ಅಧಿಕಾರಿಗಳು ಊರಿಗೆ ಬಂದಾಗ ಬಂಜಾರ (ಲಂಬಾಣಿ) ಎಂದು ನಮೂದಿಸಬೇಕಾಗಿ ಸಮಾಜದ ಭಾಂಧವರಲ್ಲಿ ಕರ್ನಾಟಕ ತಾಂಡ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರಾದ ಜಯದೇವನಾಯ್ಕ್ ಮನವಿ ಮಾಡಿದ್ದಾರೆ.

ಚಿತ್ರದುರ್ಗನಗರದಪ್ರವಾಸಿಮಂದಿರದಲ್ಲಿ ಸುದ್ದಿಗೋಷ್ಟಿಯಲ್ಲಿ ಮಾತನಾಡಿದ ಅವರು, ಮೀಸಲಾತಿ ವರ್ಗೀಕರಣ ಆಯೋಗದ ಅಧ್ಯಕ್ಷರಾದ ಗೌರವಾನ್ವಿತ ನ್ಯಾಯಮೂರ್ತಿ ನಾಗಮೋಹನ್ ದಾಸ್ ಅವರು ಸರ್ಕಾರಕ್ಕೆ ನೀಡಿರುವ ಮಧ್ಯಂತರ ವರದಿಯನ್ನು ಸುಪ್ರಿಂ ಕೋರ್ಟ್ ನಿರ್ದೇಶನ ನೀಡಿದಂತೆ ದತ್ತಾಂಶ (ಎಂಪಾರಿಕಲ್ ಡಾಟಾ) ಸಂಗ್ರಹಿಸಿ, ಅದರ ಆಧಾರದ ಮೇಲೆ ಮೀಸಲಾತಿ ನಡೆಯುತ್ತದೆ. ಕರ್ನಾಟಕ ರಾಜ್ಯಾದ್ಯಂತ ಪ್ರತಿಯೊಂದು ಜಿಲ್ಲೆಯಲ್ಲಿ ಹಾಗೂ ತಾಲ್ಲೂಕುಗಳಲ್ಲಿ ಹೋಬಳಿ ಕೇಂದ್ರಗಳಲ್ಲಿ ಹಾಗೂ ತಾಂಡಗಳಲ್ಲಿ, ಗ್ರಾಮಗಳಲ್ಲಿ ಒಳಮೀಸಲಾತಿ ವರ್ಗೀಕರಣ ಸಮೀಕ್ಷೆ ನಡೆಯಲಿದ್ದು,

ಸಮೀಕ್ಷೆ ತಂಡದ ಅಧಿಕಾರಿಗಳು ಆಯಾ ಊರಿನಲ್ಲಿ ಸಮೀಕ್ಷೆ ಮಾಹಿತಿ ಪಡೆಯಲು ಬರುತ್ತಾರೆ. ಈ ಸಂದರ್ಭದಲ್ಲಿ ಊರಿನ ನಾಯಕ್, ಕಾರಬಾರಿ, ಡಾವ್ರೋ, ಗ್ರಾಮ ಪಂಚಾಯ್ತಿ ಸದಸ್ಯರು, ವಿದ್ಯಾರ್ಥಿಗಳು, ಮಹಿಳೆಯರು,ಯುವನಾಯಕರು ಎಲ್ಲರೂ ಸೇರಿ ನಾವು ಪರಿಶಿಷ್ಟ ಜಾತಿಯಲ್ಲಿದ್ದೇವೆ. ನಮ್ಮ ಉಪಜಾತಿ ಬಂಜಾರ (ಲಂಬಾಣಿ) ಎಂದು ನಮೂದಿಸಬೇಕು ಎಂದು ತಿಳಿಸಿದರು.

ಸಮೀಕ್ಷೆಯಲ್ಲಿಉಪಜಾತಿಗಳಜನಸಂಖ್ಯೆ, ಕುಟುಂಬಗಳ ಸಂಖ್ಯೆ ಪಡೆದಿರುವ ಶಿಕ್ಷಣ, ವೃತ್ತಿ, ವಾಸಿಸುವ ಪ್ರದೇಶ ಹೊಂದಿರುವ ಸೌಲಭ್ಯಗಳು ಮುಂತಾದ ಮಾಹಿತಿಯನ್ನು ಸಂಗ್ರಹಿಸಲಾಗುತ್ತದೆ. ಆರ್ಥಿಕ ಪರಿಸ್ಥಿತಿಗೆ ಸಂಬಂಧಿಸಿದ ಮಾಹಿತಿಗಳು, ಸರ್ಕಾರಿ ಉದ್ಯೋಗ, ಖಾಸಗಿ, ಉದ್ಯೋಗ, ಭೂಮಿಯ ಒಡೆತನ, ಆದಾಯ, ಸರ್ಕಾರದಿಂದ ಪಡೆದಿರುವ ಸೌಲಭ್ಯಗಳು, ರಾಜಕೀಯ ಪ್ರಾತಿನಿಧ್ಯದ ಮಾಹಿತಿಯನ್ನು ನಮೂದಿಸಲಾಗುತ್ತದೆ. ಎಲ್ಲಾ ಜಾತಿಯನ್ನು ಹೋಲಿಸಿದರೆ ನಮ್ಮ ಜಾತಿ ತುಂಬಾ ಬಡತನದಲ್ಲಿರುವ ಜಾತಿ. ಯಾವುದೇ ರಾಜಕೀಯ ಪ್ರಾತಿನಿಧ್ಯ ಇಲ್ಲದಿರುವ ಜಾತಿಯಾಗಿರುತ್ತದೆ. ನಮ್ಮ ಜನಸಂಖ್ಯೆ ಅತೀ ಹೆಚ್ಚು 35 ಲಕ್ಷ ಇರುತ್ತದೆ ಎಂದಿದ್ದಾರೆ.

ಇದ್ದಲ್ಲದೆ ಈ ಸಮಯ ಮುಗಿದ ನಂತರವೂ ಸಹಾ ಗ್ರಾಮ ಪಂಚಾಯಿತಿಗೆ ಹೋಗಿ ಅಲ್ಲಿಂದಲೂ ಸಹಾ ತಮ್ಮ ಜಾತಿಯ ಬಗ್ಗೆ ಬರೆಸಬಹುದಾಗಿದೆ. ಪಟ್ಟಣ ಪ್ರದೇಶದಲ್ಲಿ ಜಾತಿಯ ಬಗ್ಗೆ ಹೇಳಲು ಹಿಂಜರಿಯುತ್ತಾರೆ ಇದಕ್ಕಾಗಿ ಪ್ರದೇಶವನ್ನು ಗುರುತಿಸಲಾಗಿದ್ದು ಅಲ್ಲಿ ಹೋಗುವುದರ ಮೂಲಕ ತಮ್ಮ ಜಾತಿಯ ಬಗ್ಗೆ ಬರೆಸಬಹುದಾಗಿದೆ ಎಂದು ಆಯೋಗ ತಿಳಿಸಿದೆ ಎಂದರು.

ಬಂಜಾರ ಹಿತ ರಕ್ಷಣಾ ಸಮಿತಿಯ ಅಧ್ಯಕ್ಷರಾದ ರಾಘವೇಂದ್ರ ನಾಯ್ಕ ಮಾತನಾಡಿ, ಸುಪ್ರಿಂ ಕೋರ್ಟ್ ಒಳ ಮೀಸಲಾತಿಯನ್ನು ಇಂತಿಷ್ಟು ದಿನದಲ್ಲಿ ಜಾರಿ ಮಾಡಿ ಎಂದು ಎಲ್ಲೂ ಸಹಾ ಹೇಳಿಲ್ಲ, ಈಗ ಜಾತಿಗಣತಿಯ ಮೇಲೂ ಸಹಾ ಯಾವುದೋ ಒಂದು ಜನಾಂಗದ ಒತ್ತಡ ಇದೆ ಈ ಹಿನ್ನಲೆಯಲ್ಲಿ ತುರಾತುರಿಯಾಗಿ ಜಾತಿ ಗಣತಿಯನ್ನು ಮಾಡಲು ಆಯೋಗವ ಹೊರಟ್ಟಿದೆ, ಇದು ಸರಿಯಲ್ಲಿ ಜಾತಿ ಗಣತಿಯಾಗಬೇಕಾದರೆ ಸಮಯವನ್ನು ನಿಗಧಿ ಮಾಡಬಾರದು ಏಕೆಂದರೆ ಇದು ಆತುರವಾಗಿ ಆಗುವಂತ ಕೆಲಸವಲ್ಲ ಈ ಹಿನ್ನಲೆಯಲ್ಲಿ ಆಯೋಗಕ್ಕೆ ಸಮಯವನ್ನು ನೀಡಬೇಕಿದೆ ಎಂದರು.

ಗೋಷ್ಟಿಯಲ್ಲಿ ಲಿಂಗಾನಾಯ್ಕ್, ಅರುಣ್ ಕುಮಾರ್, ಪ್ರತಾಪ್ ನಾಯ್ಕ್, ನಾಗರಾಜ್ ನಾಯ್ಕ್, ಅನಂತ ಮೂರ್ತಿ, ನಂಜಾನಾಯ್ಕ್, ರಾಮನಾಯ್ಕ್, ಶ್ರೀನಿವಾಸ್ ನಾಯ್ಕ್, ತಿಪ್ಪೇಶ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T